ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೯

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಸೋಮವಾರ, ದಿನಾಂಕ: ೦೬ನೇ ಜುಲೈ, ೨೦೧೫**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಆಯುರ್ವೇದ ಕಾಲೇಜುಗಳಲ್ಲಿ ಖಾಲಿ ಇರುವ ಸಿಬ್ಬಂದಿಗಳ ಬಗ್ಗೆ

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೪೮೮ (೩೬೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ, ಅರೆಸರ್ಕಾರಿ ಹಾಗೂ ಖಾಸಗಿ ಆಯುರ್ವೇದ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು;

(ಆ) ಪ್ರತಿ ಕಾಲೇಜುಗಳಿಗೆ ನಿಯಮಾನುಸಾರ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಹುದ್ದೆಗಳನ್ವಯ ಸಂಖ್ಯಾವಾರು ವಿವರ ಒದಗಿಸುವುದು)

(ಇ) ಪ್ರಸ್ತುತ ಖಾಲಿಯಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಹುದ್ದೆಗಳು ಎಷ್ಟು; ಯಾವ ದಿನಾಂಕದಿಂದ ಈ ಹುದ್ದೆ ತುಂಬದೇ ಬಾಕಿ ಉಳಿದಿದೆ ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಈವರೆವಿಗೂ ಕೈಗೊಂಡಿರುವ ಕಾನೂನಾತ್ಮಕ ಕ್ರಮಗಳೇನು ; ಹಾಗೂ ಸಕಾಲದಲ್ಲಿ ಭರ್ತಿ ಮಾಡದೇ ಇರುವ ಆಡಳಿತ ಮಂಡಳಿ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುವುದೇ ? (ವಿವರ ಒದಗಿಸುವುದು)

## ಅವಧಿ ಮೀರಿದ ಡೀಸೆಲ್ ವಾಹನಗಳ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸುವ ಬಗ್ಗೆ

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೪೮೯ (೬೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೦ ವರ್ಷ ಮೀರಿರುವ ಡೀಸೆಲ್ ವಾಹನಗಳಿಂದ ಹೊರಹೊಮ್ಮುವ ಹೊಗೆಯಿಂದ ಅನಗತ್ಯ ವಾಯು ಮಾಲಿನ್ಯ ಹೆಚ್ಚಾಗುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅವಧಿ ಮೀರಿದ ವಾಹನಗಳನ್ನು ಸಾರ್ವಜನಿಕವಾಗಿ ಬಳಸುವುದನ್ನು ನಿಷೇಧಿಸುವ ಬಗ್ಗೆ ಸರ್ಕಾರ ಚಿಂತಿಸುತ್ತಿದೆಯೇ;

(ಇ) ಈ ರೀತಿಯ ವಾಹನಗಳಿಂದ ಉಂಟಾಗುವ ಅನಗತ್ಯ ವಾಯುಮಾಲಿನ್ಯ ತಡೆಗಟ್ಟಲು ಸರ್ಕಾರ ವಿವಿಧ ಹಂತಗಳಲ್ಲಿ ಈಗಾಗಲೇ ಕೈಗೊಂಡಿರುವ ಯೋಜನಾಬದ್ಧ ಕ್ರಮಗಳೇನು ; (ವಿವರಗಳನ್ನು ಒದಗಿಸುವುದು)

(ಈ) ಪ್ರತಿ ನಗರವಾರು ಜನಸಂಖ್ಯೆ ಆಧಾರದ ಮೇಲೆ ವಾಹನ ನೋಂದಣಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದೇ; ಹೆಚ್ಚುವರಿ ವಾಹನಗಳ ನೋಂದಣಿಯನ್ನು ನಗರವಾರು ತಡೆಗಟ್ಟಲು ಮತ್ತು ಅನಗತ್ಯ ವಾಹನದಟ್ಟಣೆ ತಪ್ಪಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು; (ವಿವರವನ್ನು ಒದಗಿಸುವುದು)

(ಉ) ಅವಧಿ ಮೀರಿದ ವಾಹನಗಳ ಬಳಕೆಯನ್ನು ಕಡ್ಡಾಯವಾಗಿ ನಿಷೇಧಗೊಳಿಸಿದ ರಾಜ್ಯಗಳು ಯಾವುವು? (ಮಾಹಿತಿ ಒದಗಿಸುವುದು)

## ಮೆಟ್ರೋ ನಿಲ್ದಾಣಗಳಿಗೆ ನಗರ ಸಾರಿಗೆ ವ್ಯವಸ್ಥೆ ಕಲ್ಪಿಸುವುದು

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೦ (೬೫) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ನಮ್ಮ ಮೆಟ್ರೋ ರೈಲು ನಿಲ್ದಾಣಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಅನುಕೂಲವಾಗುವಂತೆ ವಾಹನ ನಿಲುಗಡೆಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಎಲ್ಲೆಲ್ಲಿ ಈ ಸೌಲಭ್ಯವನ್ನು ಒದಗಿಸಿಕೊಡಲಾಗಿದೆ ; (ವಿವರ ನೀಡುವುದು)

(ಇ) ನಮ್ಮ ಮೆಟ್ರೋ ರೈಲು ಬೆಂಗಳೂರಿನಲ್ಲಿ ಮಧ್ಯರಾತ್ರಿಯವರೆಗೆ ಪ್ರಯಾಣಿಕರಿಗೆ ಸೇವೆಯನ್ನು ಒದಗಿಸುತ್ತಿದ್ದು, ಮೆಟ್ರೋ ರೈಲ್ವೆ ನಿಲ್ದಾಣದಿಂದ ಸುತ್ತುಮುತ್ತಲ ಪ್ರದೇಶಗಳಿಗೆ ಪ್ರಯಾಣಿಸುವ ಪ್ರಯಾಣಿಕರಿಗೆ ಅನುಕೂಲವಾಗುವಂತೆ ನಗರ ಸಾರಿಗೆಯ ಸೌಲಭ್ಯವನ್ನು ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಈ) ನಮ್ಮ ಮೆಟ್ರೋ ರೈಲು ಹಾಗೂ ನಗರ ಸಾರಿಗೆ ವ್ಯವಸ್ಥೆ (ಬಿಎಂಟಿಸಿ) ಮಧ್ಯೆ ಸಮನ್ವಯತೆ ಕಾಯ್ದುಕೊಳ್ಳಲು ಸದ್ಯ ಅನುಸರಿಸುತ್ತಿರುವ ಮಾರ್ಗೋಪಾಯಗಳು ಯಾವುವು ? (ವಿವರ ಒದಗಿಸುವುದು)

## SCP ಯೋಜನೆ ಅಡಿಯಲ್ಲಿ SC/ST ಸಮುದಾಯಕ್ಕೆ ಸೇರಿದ ರೋಗಿಗಳಿಗೆ ನೀಡಿರುವ ಅನುದಾನ

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೧ (೩೪೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಆಸ್ಪತ್ರೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯಕ್ಕೆ ಸೇರಿದ ರೋಗಿಗಳ ಚಿಕಿತ್ಸೆಗಾಗಿ ವಿಶೇಷ ಘಟಕ ಯೋಜನೆ ಅಡಿಯಲ್ಲಿ ನೀಡಿರುವ ಹಣ ಎಷ್ಟು ; ಆ ಪೈಕಿ ಖರ್ಚಾದ ಹಣ ಎಷ್ಟು; ಖರ್ಚಾಗದೇ ಉಳಿದ ಹಣ ಎಷ್ಟು ;

(ಆ) ಯಾವ ಯಾವ ಆಸ್ಪತ್ರೆಗಳಲ್ಲಿ ಎಷ್ಟೆಷ್ಟು ಫಲಾನುಭವಿಗಳಿಗೆ ಚಿಕಿತ್ಸೆ ನೀಡಲಾಗಿದೆ ; ಇದಕ್ಕೆ ಖರ್ಚಾದ ಹಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಕಿದ್ವಾಯಿ, ಜಯದೇವ ಮತ್ತು ನಿಮ್ಹಾನ್ಸ್ ಆಸ್ಪತ್ರೆಗಳಿಗೆ ವಿಶೇಷ ಘಟಕ ಯೋಜನೆ (SCP) ಅಡಿಯಲ್ಲಿ ಕಳೆದ ಮೂರು ವರ್ಷಗಳಿಂದ ಒದಗಿಸಲಾಗಿರುವ ಹಣ ಎಷ್ಟು ; ಈ ಸೌಲಭ್ಯವನ್ನು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ?

## ರಾಜ್ಯದ ಜಿಲ್ಲಾ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯ ಒದಗಿಸಿರುವ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೨ (೩೪೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಜಿಲ್ಲಾ ಆಸ್ಪತ್ರೆಗಳಿಗೆ ಡಯಾಲಿಸಿಸ್ ಸೌಲಭ್ಯವನ್ನು ಒದಗಿಸಲು ಸರ್ಕಾರ ಉದ್ದೇಶಿಸಿದೆ;

(ಆ) ಹಾಗಿದ್ದಲ್ಲಿ, ೨೦೧೪-೧೫ನೇ ಸಾಲಿನಲ್ಲಿ ಎಷ್ಟು ಜಿಲ್ಲೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳ ಸೌಲಭ್ಯವನ್ನು ಒದಗಿಸಲಾಗಿದೆ;

(ಇ) ಯಾವ ಯಾವ ಜಿಲ್ಲೆಗಳಲ್ಲಿ ಒದಗಿಸಲಾಗಿದೆ;

(ಈ) ಈ ಕಾರ್ಯಕ್ರಮಕ್ಕೆ ಸರ್ಕಾರ ಒದಗಿಸಿರುವ ಹಣ ಎಷ್ಟು?

## ಎ.ಪಿ.ಎಲ್ ಪಡಿತರ ಚೀಟಿದಾರರಿಗೆ ನೀಡುತ್ತಿರುವ ಪಡಿತರ ಕುರಿತು

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೩ (೩೪೭) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಎ.ಪಿ.ಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಸರ್ಕಾರ ಜಾರಿಗೆ ತಂದಿರುವಂತೆ ಎ.ಪಿ.ಎಲ್ ಫಲಾನುಭವಿಗಳಿಗೆ ಎಷ್ಟು ಪಡಿತರ ನೀಡಲಾಗುತ್ತಿದೆ;

(ಆ) ಇದುವರೆಗೆ ಈ ಯೋಜನೆ ಅಡಿಯಲ್ಲಿ ನೀಡಲಾಗಿರುವ ಪಡಿತರ ಪ್ರಮಾಣ ಎಷ್ಟು;

(ಇ) ಕೇಂದ್ರ ಸರ್ಕಾರವು ಆಹಾರ ಭದ್ರತಾ ಯೋಜನೆ ಅಡಿಯಲ್ಲಿ ಅಕ್ಕಿ ಮತ್ತು ಗೋಧಿಯನ್ನು ರಾಜ್ಯಕ್ಕೆ ಒಂದು ಕೆ.ಜಿ.ಗೆ ಯಾವ ದರದಲ್ಲಿ ನೀಡಲಾಗುತ್ತಿದೆ;

(ಈ) ೨೦೧೪-೧೫ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ಒದಗಿಸಿರುವ ಅಕ್ಕಿ, ಗೋಧಿ ಮತ್ತು ಸಕ್ಕರೆಯನ್ನು ಎಷ್ಟು ಪೂರೈಕೆ ಮಾಡಲಾಗಿದೆ;

(ಉ) ಸರ್ಕಾರವು ನೀಡುತ್ತಿರುವ ಅನ್ನ ಭಾಗ್ಯ ಯೋಜನೆ ಕೇಂದ್ರ ಸರ್ಕಾರದ ಆಹಾರ ಭದ್ರತಾ ಯೋಜನೆ ಅಡಿಯಲ್ಲಿ ನೀಡಲಾಗುತ್ತಿದೆಯೇ ಅಥವಾ ಇದು ಪ್ರತ್ಯೇಕ ಯೋಜನೆಯೇ ?

**ಬಾಣಂತಿಯರ ಮಡಿಲು ಯೋಜನೆ ಕುರಿತು**

**ಶ್ರೀ ಡಿ.ಎಸ್.ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೪ (೩೪೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ''ಬಾಣಂತಿಯರ ಮಡಿಲು'' ಯೋಜನೆ ಚಾಲ್ತಿಯಲ್ಲಿದೆಯೇ ;

(ಆ) ಇದ್ದಲ್ಲಿ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಈ ಯೋಜನೆ ಅಡಿಯಲ್ಲಿ ಎಷ್ಟು ಮಂದಿ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲಾಗಿದೆ; ಈ ಯೋಜನೆಗೆ ಮೀಸಲಿಟ್ಟ ಹಣ ಎಷ್ಟು; ಖರ್ಚಾದ ಹಣ ಎಷ್ಟು ?

**ಡಾ: ಅಂಬೇಡ್ಕರ್ ಭವನಗಳನ್ನು ದುರಸ್ತಿ ಪಡಿಸುವುದು**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯೫ (೩೫೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಹಳ ವರ್ಷಗಳ ಹಿಂದೆ ನಿರ್ಮಿಸಿರುವ ಕೆಲವು ಡಾ: ಅಂಬೇಡ್ಕರ್ ಭವನಗಳು ದುರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ದುರಸ್ತಿಯಾಗಬೇಕಾಗಿರುವ ಡಾ: ಅಂಬೇಡ್ಕರ್ ಭವನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಡಾ: ಅಂಬೇಡ್ಕರ್ ಭವನಗಳನ್ನು ದುರಸ್ತಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ನಿಗಧಿಪಡಿಸಿರುವ ಅನುದಾನವೆಷ್ಟು? (ಮಾಹಿತಿ ನೀಡುವುದು)

## ಆರೋಗ್ಯ ಇಲಾಖೆ ಸಿಬ್ಬಂದಿಗೆ ವೈದ್ಯಕೀಯ ಬಿಲ್ ಪಾವತಿ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯೬ (೭೨೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆರೋಗ್ಯ ಇಲಾಖೆಯ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ವೈದ್ಯಕೀಯ ಬಿಲ್ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ವೈದ್ಯಕೀಯ ಬಿಲ್ ಪಾವತಿಗೆ ಹಣ ಬಿಡುಗಡೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಮಂಡ್ಯ ಜಿಲ್ಲೆಗೆ ಸುಮಾರು ರೂ.೩.೦೦ ಕೋಟಿ ಹೆಚ್ಚು ವೈದ್ಯಕೀಯ ಬಿಲ್ ಬಾಕಿ ಉಳಿದಿದ್ದು ಇದನ್ನು ಸರ್ಕಾರ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಬೋರ್‌ವೆಲ್‌ಗಳಿಗೆ ವಿದ್ಯುತ್ ಸಂಪರ್ಕ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೭ (೬೦೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಂಗಾಕಲ್ಯಾಣ ಯೋಜನೆಯಡಿ ಫಲಾನುಭವಿಗಳಿಗೆ ಕೊರಸಿಕೊಡಲಾದ ಬೋರ್‌ವೆಲ್‌ಗಳಿಗೆ ಸಮರ್ಪಕ ವಿದ್ಯುತ್

ಸಂಪರ್ಕ ಸೌಲಭ್ಯವನ್ನು ನೀಡದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದುವರೆಗೂ ಎಷ್ಟು ಗಂಗಾಕಲ್ಯಾಣ ಯೋಜನೆಯ ಫಲಾನುಭವಿಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ ;

(ಆ) ಎಲ್ಲೆಲ್ಲಿ ಈ ರೀತಿಯ ಪ್ರಕರಣಗಳು ಬೆಳಕಿಗೆ ಬಂದಿವೆ, ಇದಕ್ಕೆ ಕಾರಣಗಳೇನು, ವಿದ್ಯುತ್ ನಿಗಮಗಳು ಇದಕ್ಕೆ ಸರಿಯಾಗಿ ಸ್ಪಂದಿಸದಿರುವ ಸಂಗತಿ ನಿಜವೇ ;

(ಇ) ಹಾಗಿದ್ದಲ್ಲಿ, ಸರಿಯಾದ ಸಮಯಕ್ಕೆ ಸಮರ್ಪಕ ವಿದ್ಯುತ್ ಸರಬರಾಜು ಮಾಡದ ಕಂಪನಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಈ) ಇದರಿಂದಾಗಿ ಇಲಾಖೆಯ ಶೋಷಿತರ ಪರವಾದ ಯೋಜನೆ ವಿಫಲವಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೆ ;

(ಉ) ಭಾವಿಸಿದ್ದಲ್ಲಿ, ಯೋಜನೆಯ ಸದುಪಯೋಗ ಹಾಗೂ ಫಲಾನುಭವಿಗಳಿಗೆ ಕೂಡಲೇ ನೆರವು ಒದಗಿಸಲು ಸರ್ಕಾರ ಮುಂದಾಗುವುದೇ ; ಮತ್ತು ಯಾವ ಕ್ರಮ ಕೈಗೊಳ್ಳಲಾಗುವುದು?

## ಪಡಿತರ ಚೀಟಿ ವಿಲೇವಾರಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯೮ (೭೯೦) ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸಕ್ತ ಇರುವ ಒಟ್ಟು ಕುಟುಂಬಗಳು ಎಷ್ಟು ; ಅವುಗಳಲ್ಲಿ ಎಪಿಎಲ್, ಬಿಪಿಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿ ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಆನ್-ಲೈನ್ ಅರ್ಜಿ ಸ್ವೀಕೃತವಾಗಿ ವಿಲೇವಾರಿಗೆ ಬಾಕಿ ಇರುವ ಪ್ರಕರಣಗಳೆಷ್ಟು; ಹೊಸ ಪಡಿತರ ಚೀಟಿ ಕೋರಿ ಮತ್ತು ತಿದ್ದುಪಡಿಗೆ ಸ್ವೀಕೃತವಾದ ಅರ್ಜಿಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಕಿ ಉಳಿದಿರುವ ಅರ್ಜಿಗಳನ್ನು ಯಾವ ಕಾಲಮಿತಿಯಲ್ಲಿ ವಿಲೇವಾರಿ ಮಾಡಲಾಗುವುದು ; (ವಿವರ ನೀಡುವುದು)

(ಈ) ಪಡಿತರ ಚೀಟಿಗೆ ಅರ್ಜಿ ಸಲ್ಲಿಸುವಾಗ ಸಂಗ್ರಹಿಸಲಾಗುವ ಶುಲ್ಕವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಕಳೆದ ೨ ವರ್ಷಗಳಲ್ಲಿ ರದ್ದುಗೊಂಡ ಎಪಿಎಲ್, ಬಿಪಿಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು / ತಾಲ್ಲೂಕುವಾರು ವಿವರ ನೀಡುವುದು)

## ಸಾರಿಗೆ ಇಲಾಖೆಯಲ್ಲಿ ಆನ್‌ಲೈನ್ ಕಡ್ಡಾಯಗೊಳಿಸಿರುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯೯ (೭೮೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ-ಯಾವ ಜಿಲ್ಲೆಗಳಲ್ಲಿ ಡಿ.ಎಲ್ ಮತ್ತು ಎಲ್.ಎಲ್.ಗೆ ವಾಹನ ನೋಂದಣಿಗೆ ಕಡ್ಡಾಯ ಆನಲೈನ್ ಅರ್ಜಿಸಲ್ಲಿಕೆಯನ್ನು ಪ್ರಾರಂಭಿಸಲಾಗಿದೆಯೇ ;

(ಆ) ಎಲ್ಲಾ ಜಿಲ್ಲೆಗಳಲ್ಲಿ ಆರ್.ಟಿ.ಓ ಸೇವೆಗಳನ್ನು ಆನ್‌ಲೈನ್‌ಗೊಳಿಸಿ ಅನುಷ್ಠಾನಗೊಳಿಸಲು ಇರುವ ತೊಡಕುಗಳು ಏನು ;

(ಇ) ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿಯಿಂದ ಭ್ರಷ್ಟಾಚಾರ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಸಿ.ಸಿ ಕ್ಯಾಮರಾ ಅಳವಡಿಕೆಯೂ ಸೇರಿದಂತೆ ಕಛೇರಿಗಳಲ್ಲಿ ಪಾರದರ್ಶಕತೆ ತರಲು ಹಾಗೂ ಕಛೇರಿಗಳನ್ನು ಸಾರ್ವಜನಿಕ ಸ್ನೇಹಿಯಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೦ (೭೯೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ಅನುಷ್ಠಾನಗೊಳಿಸುತ್ತಿರುವ ಫಲಾನುಭವಿ ಆಧಾರಿತ ಕಾರ್ಯಕ್ರಮಗಳು ಯಾವುವು;

(ಆ) ಸದರಿ ಕಾರ್ಯಕ್ರಮಗಳಿಗೆ ಕಳೆದ ೨ ವರ್ಷಗಳಲ್ಲಿ ನಿಗದಿ ಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿ ಎಷ್ಟು; ಸಾಧಿಸಿರುವ ಪ್ರಗತಿ ಏನು; (ಜಿಲ್ಲಾವಾರು, ತಾಲ್ಲೂಕುವಾರು, ಯೋಜನಾವಾರು, ವರ್ಷವಾರು ವಿವರ ನೀಡುವುದು)

(ಇ) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಇಲಾಖೆಯ "ಗಂಗಾ ಕಲ್ಯಾಣ ಯೋಜನೆ" ಸೇರಿದಂತೆ ಇತರೆ ಯೋಜನೆಗಳ ಅನುಷ್ಠಾನದಲ್ಲಿ ಆಗಿರುವ ವಿಫಲತೆಯನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ವಸತಿ ನಿಲಯದ ವಿದ್ಯಾರ್ಥಿಗಳ ತಲಾ ಅನುದಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೧ (೭೮೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಇಲಾಖೆಯ ವ್ಯಾಪ್ತಿಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಊಟ, ಪಠ್ಯ ಪುಸ್ತಕ, ಲೇಖನ ಸಾಮಗ್ರಿ, ಸಮವಸ್ತ್ರ, ಹಾಸಿಗೆ, ಹೊದಿಕೆ, ತಟ್ಟೆ, ವೈದ್ಯಕೀಯ, ಕ್ರೀಡಾಸಾಮಗ್ರಿ ಮತ್ತು ಇತರೆ ವೆಚ್ಚಗಳಿಗಾಗಿ ನಿಗದಿಪಡಿಸಲಾಗಿರುವ ಮಾಸಿಕ ಅನುದಾನ ಎಷ್ಟು; (ತಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿನ ಅಲ್ಪಸಂಖ್ಯಾತ ಇಲಾಖೆಯ ವಸತಿ ನಿಲಯದ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ಊಟ, ಪಠ್ಯಪುಸ್ತಕ, ಲೇಖನ ಸಾಮಗ್ರಿ, ಸಮವಸ್ತ್ರ, ಹಾಸಿಗೆ, ಹೊದಿಕೆ, ತಟ್ಟೆ, ವೈದ್ಯಕೀಯ, ಕ್ರೀಡಾ ಸಾಮಗ್ರಿ ಮತ್ತು ಇತರೆ ವೆಚ್ಚಗಳ ಮಾಸಿಕ ತಲಾ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದ ಅಲ್ಪ ಸಂಖ್ಯಾತ ವಸತಿ ನಿಲಯ, ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗದ ವಸತಿ ನಿಲಯದ ವಿದ್ಯಾರ್ಥಿಗಳಿಗೆ ನಿಗದಿಪಡಿಸಿರುವ ತಲಾ ಅನುದಾನದಲ್ಲಿ ವ್ಯತ್ಯಾಸವಿರುವುದು ನಿಜವೇ; ಸರ್ಕಾರದ ಈ ರೀತಿ ತಾರತಮ್ಯ ನೀತಿ ಅನುಸರಿಸಲು ಕಾರಣವೇನು; (ವಿವರ ನೀಡುವುದು)

(ಈ) ಮೇಲಿನ ತಾರತಮ್ಯವನ್ನು ಸರಿದಂತೆ, ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ವಸತಿ ನಿಲಯಗಳನ್ನು ಮೇಲ್ದರ್ಜೆಗೇರಿಸುವ ನಿಟ್ಟಿನಲ್ಲಿ ಹಾಗೂ ವಿದ್ಯಾರ್ಥಿಗಳ ಹಿತ ಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ವಸತಿ ನಿಲಯಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೨ (೩೫೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ವಿದ್ಯಾರ್ಥಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳ ಮಕ್ಕಳು ವಸತಿ ನಿಲಯದ ಪ್ರಯೋಜನ ಪಡೆದಿದ್ದಾರೆ;

(ಆ) ಸರ್ಕಾರ ಹಾಗೂ ಖಾಸಗಿ ಸಂಸ್ಥೆಗಳು ನಡೆಸುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) ಪ್ರತಿ ವರ್ಷ ಅನುದಾನ ಪಡೆಯುತ್ತಿರುವ ಖಾಸಗಿ ವಸತಿ ನಿಲಯಗಳೆಷ್ಟು; (ವಸತಿ ನಿಲಯಗಳವಾರು ವಿವರ ನೀಡುವುದು)

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ವರ್ಗಗಳ ವಸತಿ ನಿಲಯಗಳಿಗೆ ಬೇಡಿಕೆ ಇದೆಯೇ;

(ಈ) ಹೊಸದಾಗಿ ಖಾಸಗಿ ಸಂಸ್ಥೆಗಳು ವಸತಿ ನಿಲಯಗಳನ್ನು ನಡೆಸಲು ಅನುಮತಿ ನೀಡಲಾಗುತ್ತಿದೆಯೇ;

(ಉ) ಇದ್ದಲ್ಲಿ, ಅದರ ಮಾನದಂಡಗಳೇನು?

## ಬಾಲಕರ ವಸತಿ ನಿಲಯಗಳ ಸ್ವಂತ ಕಟ್ಟಡ

**ಶ್ರೀ ಜಿ.ಎಸ್.ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೩ (೩೫೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು ಇಲ್ಲಿ ಬಾಲಕರ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಬಾಲಕರ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ಯಾವ ಕಾಲಮಿತಿಯಲ್ಲಿ ಮಂಜೂರಾತಿ ನೀಡಲಾಗುತ್ತದೆ ;

(ಇ) ಈಗಿರುವ ವಸತಿ ನಿಲಯವು ಹಳೆಯ ಕಟ್ಟಡದ ದುಸ್ಥಿತಿಯಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಟ್ಟಡಕ್ಕೆ ಸ್ಥಳಾವಕಾಶವನ್ನು ಗುರುತಿಸಲಾಗಿದೆಯೇ ?

## "ಅನ್ನಭಾಗ್ಯ" ಯೋಜನೆ ರೇಷನ್ ಖರೀದಿಸುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೪ (೭೯) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಅನ್ನಭಾಗ್ಯ" ಯೋಜನೆ ಜಾರಿಗೆ ಬಂದನಂತರ ಸರ್ಕಾರದಿಂದ ಖರೀದಿಸಲಾಗಿರುವ ಅಕ್ಕಿ, ರಾಗಿ, ಜೋಳ ಎಷ್ಟು ; ರಾಜ್ಯದಲ್ಲಿ ಖರೀದಿಸಲಾಗಿರುವುದು ಎಷ್ಟು ; ಮತ್ತು ಹೊರ ರಾಜ್ಯದಿಂದ ಖರೀದಿಸಲಾಗಿರುವುದು ಎಷ್ಟು ;

(ಆ) ನ್ಯಾಯಬೆಲೆ ಅಂಗಡಿಗಳಲ್ಲಿ ಬಯೋ ಮೆಟ್ರಿಕ್ ಯಂತ್ರ ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ?

## ರಾಜ್ಯದಲ್ಲಿ ಬಸ್ಸುಗಳಿಗೆ ಕ್ಯಾರಿಯರ್ ಹಾಕುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೫ (೮೦೦) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಳ್ಳಿಗಳಿಗೆ ಹೋಗುವ ರಾಜ್ಯ ರಸ್ತೆ ಸಾರಿಗೆ ಬಸ್ಸುಗಳು "ಕ್ಯಾರಿಯರ್" ವ್ಯವಸ್ಥೆ ಇಲ್ಲದೆ ಹಳ್ಳಿಗಳಿಗೆ ಹೋಗುತ್ತಿದ್ದು ರೈತರು ಬೆಳೆದ ಬೆಳೆಗಳನ್ನು ಪಟ್ಟಣಕ್ಕೆ ತರಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ನಿವಾರಿಸಲು ಸರ್ಕಾರ ಚಿಂತಿಸುವುದೇ ?

## "ಆರೋಗ್ಯ ಕವಚ" (೧೦೮) ಸಿಬ್ಬಂದಿ ವರ್ಗದವರ ನಿರ್ದಿಷ್ಟ ಕನಿಷ್ಟ ವೇತನ ನೀಡುವ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೬ (೭೨೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಆರೋಗ್ಯ ಕವಚ" (೧೦೮) ಸಿಬ್ಬಂದಿ ವರ್ಗದವರಿಗೆ ಕಾರ್ಮಿಕ ಕಾನೂನಿನ್ವಯ ನಿರ್ದಿಷ್ಟ ಕನಿಷ್ಟ ವೇತನ ನೀಡಲಾಗುತ್ತಿದೆಯೇ ; ಹಾಗೆಯೇ ಹೆಚ್ಚುವರಿ ಅವಧಿಯ ವೇತನ ನೀಡಲಾಗುತ್ತಿದೆಯೇ;

(ಆ) ಇಲ್ಲದಿದ್ದಲ್ಲಿ, ದಿನದ ಕನಿಷ್ಟ ೧೨ ಗಂಟೆಗಳ ಕಾಲ ಅತಿ ಅವಶ್ಯ ಸೇವೆಯಲ್ಲಿರುವ ಇವರಿಗೆ ಬದುಕಲು ಕಷ್ಟವಾಗುವುದಿಲ್ಲವೆ ; ಇವರ ಸೇವೆಯನ್ನು ಯಾವ ಮೂಲದಿಂದ ಪಡೆಯಲಾಗುತ್ತಿದೆ ; ಅವರ ಮತ್ತು ಸರ್ಕಾರದ ನಡುವೆ ಆದ ಕರಾರುಗಳು ಯಾವುವು ; ಅವು ಕಾನೂನು ಬದ್ಧವಾಗಿದೆಯೇ ; (ವಿವರ ನೀಡುವುದು)

(ಇ) ಇಂತಹ ಸಿಬ್ಬಂದಿ ರಾಜ್ಯದಲ್ಲಿ ಎಷ್ಟು ಜನ ಸೇವೆಯಲ್ಲಿದ್ದಾರೆ ?

## ಜಮಖಂಡಿಗೆ ಹೊಸ ಬಸ್ ನಿಲ್ದಾಣ ನಿರ್ಮಿಸುವ ಮತ್ತು ಡಿಪೋ ಸ್ಥಳಾಂತರ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೭ (೭೨೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಮಖಂಡಿ ಬಸ್ ನಿಲ್ದಾಣ ಕಟ್ಟಡ ಶಿಥಿಲಾವಸ್ಥೆಯಲ್ಲಿರುವುದು ಮತ್ತು ಮಳೆಗಾಲದಲ್ಲಿ ಬಸ್ ನಿಲ್ದಾಣದ ಆವರಣದಲ್ಲಿ ನೀರು ನಿಲ್ಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಹೊಸ ಬಸ್ ನಿಲ್ದಾಣ ಕಟ್ಟಡ ಕಟ್ಟುವ ಮತ್ತು ನೀರು ನಿಲ್ಲದಂತೆ ಡ್ರೈನೇಜ್ ಮಾಡುವ ಯೋಜನೆಯನ್ನು ಸರ್ಕಾರದ ತೆಗೆದುಕೊಂಡಿದೆಯೇ ; ತೆಗೆದುಕೊಂಡಿದ್ದರೆ, ಯಾವ ಕಾಲಮಿತಿಯಲ್ಲಿ ಯೋಜನೆ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಇ) ಜಮಖಂಡಿ ಬಸ್ ನಿಲ್ದಾಣ ಮತ್ತು ಡಿಪೋ ಒಂದೇ ಆವರಣದಲ್ಲಿರುವ ಕಾರಣ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದಲ್ಲಿ ಡಿಪೋ ಸ್ಥಳಾಂತರಿಸುವ ಯೋಜನೆ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಮೈಸೂರಿನಲ್ಲಿ ರೈಲ್ವೆ ಮೆಡಿಕಲ್ ಕಾಲೇಜು ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೦೮ (೩೫೪) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಲ್ಲಿ ರೈಲ್ವೆ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡುವ ಬಗ್ಗೆ ಕೇಂದ್ರ ರೈಲ್ವೆ ಬಜೆಟ್‌ನಲ್ಲಿ ಯಾವಾಗ ಘೋಷಣೆ

ಮಾಡಲಾಯಿತು ; ಇದುವರೆಗೆ ಈ ಕಾಲೇಜು ಸ್ಥಾಪನೆಯ ಬಗ್ಗೆ ರೈಲ್ವೆ ಇಲಾಖೆ ಕೈಗೊಂಡಿರುವ ಕ್ರಮಗಳು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕಾಲೇಜು ಸ್ಥಾಪನೆ ಕಾರ್ಯ ಯಾವ ಹಂತದಲ್ಲಿದೆ, ಈ ಬಗ್ಗೆ ರೈಲ್ವೆ ಇಲಾಖೆಯು ರಾಜ್ಯ ಸರ್ಕಾರಕ್ಕೆ ಭೂಮಿ, ಮೂಲಭೂತ ಸೌಲಭ್ಯ ಇತ್ಯಾದಿಗಳನ್ನು ಒದಗಿಸುವ ವಿಚಾರದಲ್ಲಿ ಯಾವುದಾದರೂ ಕೋರಿಕೆಯನ್ನು ಸಲ್ಲಿಸಿದೆಯೇ ;

(ಇ) ಕೇಂದ್ರ ರೈಲ್ವೆ ಬಜೆಟ್‌ನಲ್ಲಿ ಘೋಷಣೆ ಮಾಡಿರುವಂತೆ ಮೈಸೂರಿನಲ್ಲಿ ರೈಲ್ವೆ ಮೆಡಿಕಲ್ ಕಾಲೇಜು ಸ್ಥಾಪನೆ ಮಾಡಲು ತ್ವರಿತ ಕ್ರಮ ತೆಗೆದುಕೊಳ್ಳುವಂತೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಒತ್ತಾಯ ಮಾಡುವುದೇ ; ಈ ಬಗ್ಗೆ ಮನವಿ ಸಲ್ಲಿಸುವುದೇ ?

## ರಾಜ್ಯದಲ್ಲಿ ಒಟ್ಟು ಜನಸಂಖ್ಯೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)** –

೫೦೯ (೬೨೨) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದಲ್ಲಿರುವ ಒಟ್ಟು ಜನ ಸಂಖ್ಯೆ ಎಷ್ಟು; ಪುರುಷ ಮತ್ತು ಮಹಿಳೆಯರ ಸಮೇತ ತಾಲ್ಲೂಕುವಾರು ಮಾಹಿತಿ ಒದಗಿಸುವುದು; ರಾಜ್ಯದ ಮೇಲೆ ಎಲ್ಲಾ ಮೂಲಗಳಿಂದ ಇರುವ ಒಟ್ಟು ಸಾಲವೆಷ್ಟು; ಪ್ರತಿಯೊಬ್ಬ ವ್ಯಕ್ತಿಗೆ ಎಷ್ಟು ಸಾಲದ ಬಾರವಿರುತ್ತದೆ ?

## ಹಾವೇರಿ ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದಿಂದ ನಡೆದ ಕಾಮಗಾರಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೫೧೦ (೬೧೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದಿಂದ ನಡೆದ ಕಾಮಗಾರಿಗಳು ಯಾವುವು (೨೦೦೮ ರಿಂದ ೨೦೧೫ರವರೆಗೆ) ವಿವರವಾದ ಮಾಹಿತಿ ಒದಗಿಸುವುದು ;

(ಆ) ಸದರಿ ಸಾಲಿನಲ್ಲಿ ನಡೆದ ಕಾಮಗಾರಿಗಳಲ್ಲಿ ಎಲ್ಲೆಲ್ಲಿ ಕಳಪೆ ಕಾಮಗಾರಿ ನಡೆದಿದೆ; ಕಳಪೆ ಕಾಮಗಾರಿ ನಡೆದ ಹಿನ್ನೆಲೆಯಲ್ಲಿ ಎರಡನೇ ಬಾರಿ ಮಾಡಿರುವ ಕಾಮಗಾರಿಯೂ ನೆಗಳೂರು ಮುರಾರ್ಜಿ ವಸತಿ ಶಾಲೆಯಲ್ಲಿ ನಿರ್ಮಿತಿ ಕೇಂದ್ರದ ಮೊದಲ ಬಾರಿ ಕಟ್ಟಿದ ಕಟ್ಟಡ ಸಮೇತ ಸಹ ಇನ್ನೂ ಕಳಪೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತಹ ಕಾಮಗಾರಿಗಳ ವಿವರ ಒದಗಿಸುವುದು ;

(ಇ) ಪ್ರತಿ ಕಾಮಗಾರಿಗೆ ಕಾಲಮಿತಿ ಗೊತ್ತುಪಡಿಸಿದರೂ ಅವು ಕಾಲಮಿತಿಯಲ್ಲಿ ಪೂರ್ತಿಗೊಳ್ಳದಿರುವುದರಿಂದ ಯಾವ ಯಾವ ಕಾಮಗಾರಿಗೆ ಎಷ್ಟು ಕಾಲಮಿತಿ ಗೊತ್ತುಪಡಿಸಲಾಗಿತ್ತು; ಗೊತ್ತುಪಡಿಸಿದ ಕಾಲಮಿತಿ ಮುಗಿದ ದಿನಾಂಕದ ವಿವರ ಒದಗಿಸುವುದು ;

(ಈ) ನಿರ್ಮಿತಿ ಕೇಂದ್ರದ ಕಳಪೆ ಕಾಮಗಾರಿಗಳು ಸರ್ಕಾರದ ಗಮನಕ್ಕೆ ಬಂದರೂ ಮತ್ತೆ ಮತ್ತೆ ಅವರಿಗೆ ಕೆಲಸ ವಹಿಸುವುದು ಎಷ್ಟರ ಮಟ್ಟಿಗೆ [illegible] ಈ ಬಗ್ಗೆ ಸರ್ಕಾರದ ನಿರ್ಧಾರವೇನು ?

## ಅನ್ನಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೫೧೧ (೬೨೦) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನ್ನ ಭಾಗ್ಯ ಯೋಜನೆಯಲ್ಲಿ ೨೦೧೩–೧೪, ೨೦೧೪–೧೫ರಲ್ಲಿ ಎಷ್ಟು ಕುಟುಂಬಗಳಿಗೆ ಅಕ್ಕಿಯನ್ನು ವಿತರಣೆ ಮಾಡಲಾಗಿದೆ ; ಇವುಗಳ ಕಾರ್ಡು ಸಂಖ್ಯೆ ಎಷ್ಟು ; (ವರ್ಷವಾರು ಮಾಹಿತಿ ಒದಗಿಸುವುದು) ಇದಕ್ಕೆ ಬೇಕಾದ ಅಕ್ಕಿ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಈ ಅಕ್ಕಿಯನ್ನು ಕರ್ನಾಟಕದಲ್ಲಿ ಎಷ್ಟು ಟನ್ ಖರೀದಿಸಲಾಗಿದೆ, ಹೊರಗಿನ ರಾಜ್ಯದಿಂದ ಎಷ್ಟು ಖರೀದಿಸಲಾಗಿದೆ, ಕರ್ನಾಟಕದಲ್ಲಿ ಖರೀದಿಸಿದ ಅಕ್ಕಿ ದರ ಎಷ್ಟು, ಹೊರ ರಾಜ್ಯದಲ್ಲಿ ಖರೀದಿಸಿದ ಅಕ್ಕಿ ದರ ಎಷ್ಟು ?

## ಬಾಲಕ ಮತ್ತು ಬಾಲಕಿಯರ ವಸತಿ ನಿಲಯದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೫೧೨ (೬೨೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೨೦೧೪ ರಲ್ಲಿ ೨೦೧೪–೨೦೧೫ನೇ ಸಾಲಿನಲ್ಲಿ ಪ್ರತಿ ವರ್ಷ ರಾಜ್ಯದಲ್ಲಿರುವ ಸರ್ಕಾರಿ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ದುರಸ್ಥಿಗೆ ಮೀಸಲಿಟ್ಟ ಹಣವೆಷ್ಟು;

(ಆ) ಹಾವೇರಿ ಜಿಲ್ಲೆಯ ೭ ತಾಲ್ಲೂಕುಗಳಲ್ಲಿ ಯಾವ ಯಾವ ಬಾಲಕರ, ಬಾಲಕಿಯರ ವಸತಿ ನಿಲಯಗಳಿಗಾಗಿ ಎಷ್ಟು ಹಣ ದುರಸ್ಥಿಗೆ ವೆಚ್ಚ ಮಾಡಲಾಗಿದೆ ? (ಹೆಸರು ಸಮೇತ ವಿವರ ಒದಗಿಸುವುದು)

## ದವಸ ಧಾನ್ಯಗಳಿಗೆ ಅಪಾಯಕಾರಿ ಬಣ್ಣ ಲೇಪನ ಮಾಡುತ್ತಿರುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೧೩ (೬೦೩) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೊಗರಿ, ಬಟಾಣಿ ಮತ್ತು ಇನ್ನಿತರೆ ಕಳಪೆ ಗುಣಮಟ್ಟದ ಧಾನ್ಯಗಳಿಗೆ ಅಪಾಯಕಾರಿ ಬಣ್ಣ ಹಚ್ಚಿ ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಧಾನ್ಯಗಳಿಗೆ ಅಪಾಯಕಾರಿ ಬಣ್ಣ ಲೇಪಿಸಿ ಮಾರುತ್ತಿರುವ ಎಷ್ಟು ಪ್ರಕರಣಗಳು ರಾಜ್ಯದಲ್ಲಿ ವರದಿಯಾಗಿವೆ; ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಉಚಿತ ಪಡಿತರ ವಿತರಣೆಯಲ್ಲಿ ಅವ್ಯವಹಾರ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೧೪ (೩೬೧) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಉಚಿತ ಪಡಿತರ ವಿತರಣೆಯಲ್ಲಿ ಹಣ ಪಡೆದು ಅಕ್ಕಿ ಗೋಧಿ ಹಾಗೂ ಇನ್ನಿತರ

ಪಡಿತರ ಸಾಮಗ್ರಿ ವಿತರಣೆ ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ನಿಟ್ಟಿನಲ್ಲಿ ಇಲಾಖೆಗೆ ಬಂದಿರುವ ಲಿಖಿತ ದೂರುಗಳೆಷ್ಟು ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಸರ್ಕಾರದಿಂದಲೇ ಪಡಿತರ ವಿತರಣಾ ವ್ಯವಸ್ಥೆಯನ್ನು ಜಾರಿಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ಸಿಟಿ ರೈಲ್ವೆ ನಿಲ್ದಾಣದಿಂದ ಬಸ್ಸುಗಳ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೧೫ (೩೬೨) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಸಿಟಿ ರೈಲು ನಿಲ್ದಾಣದಲ್ಲಿ ಬಿ.ಎಂ.ಟಿ.ಸಿ. ಬಸ್‌ಬೇ ವ್ಯವಸ್ಥೆ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಬಸ್‌ಬೇ ಯಿಂದ ಪ್ರತಿ ದಿನ ಬೆಂಗಳೂರು ಮಹಾನಗರ ಸಾರಿಗೆಯ ಎಷ್ಟು ಬಸ್‌ಗಳು ಎಷ್ಟು ಸುತ್ತು ಸಂಚರಿಸುತ್ತಿವೆ ಹಾಗೂ ಯಾವ ಸಮಯದಲ್ಲಿ ಸಂಚರಿಸುತ್ತಿವೆ; (ಮಾಹಿತಿ ನೀಡುವುದು)

(ಇ) ಬೆಂಗಳೂರು ಸಿಟಿ ರೈಲು ನಿಲ್ದಾಣದಿಂದ ಪ್ರತಿ ದಿನ ಕೇಂದ್ರ ಹಾಗೂ ರಾಜ್ಯ ಸರ್ಕಾರಿ ನೌಕರರು ವಿವಿಧ ಸ್ಥಳಗಳಿಗೆ ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸರ್ಕಾರಿ ನೌಕರರ ಹಾಗೂ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಸಾಮಾನ್ಯ ದರ್ಜೆಯ ಬಸ್ ಸೌಕರ್ಯ ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

(ಉ) ಸರ್ಕಾರಿ ನೌಕರರ ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳುವುದೇ?

## ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೫೧೬ (೭೨೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡುವ ಯೋಜನೆಯನ್ನು ಯಾವಾಗಿನಿಂದ ಆರಂಭಿಸಲಾಯಿತು ;

(ಆ) ಈ ಯೋಜನೆಯಡಿ ಪ್ರತಿ ವರ್ಷ ಯಾವ ಯಾವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ ;

(ಇ) ಇಲ್ಲಿಯವರೆಗೆ ಎಷ್ಟು ಅಭ್ಯರ್ಥಿಗಳು ತರಬೇತಿ ಪಡೆದಿದ್ದಾರೆ; (ವರ್ಷವಾರು ಹಾಗೂ ಪರೀಕ್ಷಾವಾರು ಮಾಹಿತಿ ನೀಡುವುದು)

(ಈ) ತರಬೇತಿ ಪಡೆದಿರುವವರಲ್ಲಿ ಎಷ್ಟು ಜನರು ನೇಮಕಾತಿ ಹೊಂದುವಲ್ಲಿ ಯಶಸ್ವಿಯಾಗಿದ್ದಾರೆ ; (ವಿವರವಾದ ಮಾಹಿತಿ ನೀಡುವುದು)

(ಉ) ಈ ತರಬೇತಿಗೆ ಪ್ರತಿ ವರ್ಷ ಒದಗಿಸಲಾದ ಅನುದಾನ ಎಷ್ಟು ?

## ಎಸ್.ಸಿ./ಎಸ್.ಟಿ.ಯ ನಕಲಿ ಪ್ರಮಾಣ ಪತ್ರ ಸೃಜನೆ ಮತ್ತು ದುರುಪಯೋಗ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೫೧೭ (೬೦೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಸರ್ಕಾರಿ ನೌಕರರು ಮತ್ತು ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗಪಡಿಸಿಕೊಂಡಿರುವ ಪ್ರಕರಣಗಳು ಎಷ್ಟು ಮತ್ತು ಯಾವುವು ; (ಜಿಲ್ಲಾವಾರು, ಪ್ರಕರಣವಾರು, ವರ್ಷವಾರು ವಿವರ ನೀಡುವುದು)

(ಆ) ಮೇಲಿನ ಪ್ರಕರಣಗಳಲ್ಲಿ ಶಿಕ್ಷೆಯಾಗಿರುವ ಪ್ರಕರಣಗಳೆಷ್ಟು ; ಪ್ರಸ್ತುತ ವಿಚಾರಣೆ ನಡೆಯುತ್ತಿರುವ ಪ್ರಕರಣಗಳೆಷ್ಟು ; ಪ್ರಸ್ತುತ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು, ವರ್ಷವಾರು, ಪ್ರಕರಣವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಪ್ರಮಾಣ ಪತ್ರಗಳನ್ನು ಸೃಜಿಸಿ ದುರುಪಯೋಗ ಪಡಿಸಿಕೊಂಡ ವ್ಯಕ್ತಿಗಳು ಹಾಗೂ ದುರುಪಯೋಗ ಪಡಿಸಿಕೊಳ್ಳುವ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಳ್ಳುವ ತುರ್ತು ಕಾನೂನು ಕ್ರಮಗಳೇನು ?

## ಗಂಗಾ ಕಲ್ಯಾಣ ಯೋಜನೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೫೧೮ (೬೦೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕಳೆದ ೫ ವರ್ಷಗಳಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆದಿರುವ ಕೊಳವೆ ಬಾವಿಗಳೆಷ್ಟು; (ಜಿಲ್ಲಾವಾರು ಹೆಸರು ಹಾಗೂ ವಿಳಾಸವಾರು ಮಾಹಿತಿ ನೀಡುವುದು)

(ಆ) ಎಷ್ಟು ಕೊಳವೆ ಬಾವಿಗಳಲ್ಲಿ ನೀರಿನ ಪ್ರಮಾಣ ತೃಪ್ತಿಕರವಾಗಿದೆ;

(ಇ) ಈಗ ಸಧ್ಯಕ್ಕೆ ಕೊರೆದಿರುವ ಕೊಳವೆ ಬಾವಿಗಳಲ್ಲಿ ತೃಪ್ತಿಕರವಾಗಿ ಕಾರ್ಯನಿರ್ವಹಿಸುತ್ತಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು;

(ಈ) ಮೇಲ್ಕಂಡ ಯೋಜನೆಯಲ್ಲಿ ನೀರು ಬರದಿದ್ದರೂ ಅದಕ್ಕೆ ವೆಚ್ಚವನ್ನು ಭರಿಸಿರುವ ಪ್ರಕರಣಗಳೆಷ್ಟು;

(ಉ) ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಎಲೆಕ್ಟ್ರಾನಿಕ್ ಬ್ಯಾಟರಿ ಚಾಲಿತ ಸಾರಿಗೆ ವಾಹನಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೫೧೯ (೬೦೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಎಲೆಕ್ಟ್ರಾನಿಕ್ ಬ್ಯಾಟರಿ ಚಾಲಿತ ಸಾರಿಗೆ ವಾಹನಗಳನ್ನು ತರುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಆ) ಇದ್ದರೆ, ಯಾವ ಯಾವ ಸಾಮರ್ಥ್ಯದ ಸಾರಿಗೆ ವಾಹನಗಳನ್ನು ಬಳಕೆಗೆ ಬಿಡಲಾಗುತ್ತದೆ; ಇದರ ರೂಪುರೇಷೆಗಳೇನು?

## ಆಯುಷ್ ವೈದ್ಯರುಗಳಿಗೆ ನೀಡುತ್ತಿರುವ ವೇತನ ಮತ್ತು ಭತ್ಯೆ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೫೨೦ (೬೧೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಲೋಪತಿ ವೈದ್ಯರುಗಳಿಗೆ ಮತ್ತು ಆಯುಷ್ ವೈದ್ಯರುಗಳಿಗೆ ನೀಡುತ್ತಿರುವ ವೇತನ ಗ್ರಾಮೀಣ ಭತ್ಯೆ ಸ್ನಾತಕೋತ್ತರ ಭತ್ಯೆಗಳ ಬಗ್ಗೆ ; (ಮಾಹಿತಿ ನೀಡುವುದು)

(ಆ) ಜಗತ್ತಿನ ಪುರಾತನ ವೈದ್ಯ ಪದ್ಧತಿಯಾದ ಆಯುರ್ವೇದ ವೈದ್ಯ ಪದ್ಧತಿಯನ್ನು ಜನಪ್ರಿಯಗೊಳಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ;

(ಇ) ಜಿಲ್ಲಾ ಮಟ್ಟದಿಂದ ಹೋಬಳಿ ಮಟ್ಟದವರೆಗೆ ಇರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಆಯುರ್ವೇದ ವೈದ್ಯರುಗಳನ್ನು ನೇಮಕ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ?

## ನರ್ಸಿಂಗ್ ಕಾಲೇಜುಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೫೨೧ (೬೦೯) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ನರ್ಸ್‌ಗಳ ಸಂಖ್ಯೆ ಎಷ್ಟು ;

(ಆ) ಅವಶ್ಯಕತೆಗಿಂತ ಕಡಿಮೆ ನರ್ಸ್‌ಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ನರ್ಸಿಂಗ್ ಎಜ್ಯುಕೇಷನ್/ಇನ್‌ಸ್ಟಿಟ್ಯೂಟ್‌ಗಳನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ ?

## ಖಾಸಗಿ ಆಸ್ಪತ್ರೆಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೫೨೨ (೬೦೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿರುವ ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಈ ಆಸ್ಪತ್ರೆಗಳಲ್ಲಿರುವ ರೋಗಿಗಳಿಗೆ ನೀಡುವ ಚಿಕಿತ್ಸೆಗಳ ದರ ಪಟ್ಟಿ ಪ್ರಕಟಿಸಲಾಗಿದೆಯೇ ;

(ಆ) ಪ್ರಕಟಿಸದಿದ್ದರೆ, ಯಾವ ಮಾನದಂಡದ ಮೇಲೆ ಈ ದರ ನಿರ್ಧರಿಸಲಾಗುವುದು ;

(ಇ) ಬೆಂಗಳೂರಿನಲ್ಲಿರುವ ಖಾಸಗಿ ಆಸ್ಪತ್ರೆಗಳು ರೋಗಿಗಳಿಂದ ದುಬಾರಿ ಚಿಕಿತ್ಸಾ ಶುಲ್ಕ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಅಂತಹ ಆಸ್ಪತ್ರೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಹೈದರಾಬಾದ್–ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಕಳೆದ ೨ ವರ್ಷದಲ್ಲಿ ನೀಡಲಾದ ಅನುದಾನ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೨೩ (೭೭೧) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಕಳೆದ ಎರಡು ವರ್ಷಗಳಲ್ಲಿ ನೀಡಲಾದ ಅನುದಾನದ ಒಟ್ಟು ಮೊತ್ತವೆಷ್ಟು; ಲಭ್ಯವಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಇದರಲ್ಲಿ ಎಷ್ಟು ಅನುದಾನವನ್ನು ಯಾವ ಯಾವ ಕಾಮಗಾರಿಗೆ ಬಿಡುಗಡೆ ಮಾಡಲಾಗಿದೆ ; (ಕಾಮಗಾರಿವಾರು, ತಾಲ್ಲೂಕುವಾರು ಮೊತ್ತದ ವಿವರ ನೀಡುವುದು)

(ಇ) ಸದರಿ ಮಂಡಳಿಯ ಅನುದಾನದ ಪೈಕಿ ಮಾನ್ಯ ವಿಧಾನ ಸಭೆ ಮತ್ತು ವಿಧಾನ ಪರಿಷತ್ ಶಾಸಕರುಗಳ ಅಭಿವೃದ್ಧಿ ಕಾರ್ಯಗಳಿಗಾಗಿ ಎಷ್ಟು ಅನುದಾನ ನೀಡಲಾಗಿದೆ ? (ವಿವರ ನೀಡುವುದು)

## ಹೊಸ ಪಡಿತರ ಚೀಟಿಗಾಗಿ ಅರ್ಜಿ ಸ್ವೀಕರಿಸುವ ಪ್ರಕ್ರಿಯೆ ಪ್ರಾರಂಭಿಸಲು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೨೪ (೭೬೮) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಹೊಸ ಪಡಿತರ ಚೀಟಿಗಾಗಿ ಸ್ವೀಕೃತವಾದ ಅರ್ಜಿಗಳಲ್ಲಿ ವಿಲೇವಾರಿ ಆಗದೇ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಎಷ್ಟು ದಿನಗಳಿಂದ ಬಾಕಿ ಉಳಿದಿವೆ, ಈ ರೀತಿ ಬಾಕಿ ಉಳಿಯಲು ಕಾರಣವೇನು ; ಬಾಕಿ ಪ್ರಕರಣಗಳ ಬಗ್ಗೆ ತಾಲ್ಲೂಕುವಾರು ವಿವರ ನೀಡುವುದು ;

(ಆ) ಪ್ರಸ್ತುತ ಸಾರ್ವಜನಿಕರು ಹೊಸ ಪಡಿತರ ಚೀಟಿ ಪಡೆಯಲು ಅರ್ಜಿ ಸ್ವೀಕರಿಸುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ ; ಇಲ್ಲದಿದ್ದರೆ, ಅರ್ಜಿ ಸ್ವೀಕರಿಸುವ ಕಾರ್ಯ ಎಂದು ಪ್ರಾರಂಭಿಸಲಾಗುವುದು ?

## ಹಡಗಲಿ ೧೦೦ ಹಾಸಿಗೆಗಳ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೨೫ (೭೭೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯ ಹಡಗಲಿಯಲ್ಲಿ ೧೦೦ ಹಾಸಿಗೆಗಳ ಆಸ್ಪತ್ರೆಯನ್ನು ಎಂದು ಸ್ಥಳಾಂತರಿಸಿ, ಯಾವಾಗ ಅಧಿಕೃತವಾಗಿ ಪ್ರಾರಂಭಿಸಲಾಗಿದೆ ;

(ಆ) ಈ ಆಸ್ಪತ್ರೆಯಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆಯಿದ್ದರೂ, ಅಧಿಕೃತವಾಗಿ ಉದ್ಘಾಟನೆ ಮಾಡದೆ, ತರಾತುರಿಯಲ್ಲಿ ಆಸ್ಪತ್ರೆಯನ್ನು ಅಪೂರ್ಣಗೊಂಡ ೧೦೦ ಹಾಸಿಗೆಗಳ ಆಸ್ಪತ್ರೆಗೆ ಸ್ಥಳಾಂತರಿಸಲು ಕಾರಣಗಳೇನು ;

(ಈ) ಸಂಪೂರ್ಣ ಮೂಲಭೂತ ಸೌಕರ್ಯಗಳನ್ನು ಸದರಿ ಆಸ್ಪತ್ರೆಗೆ ಒದಗಿಸಲು ಮತ್ತು ಅಧಿಕೃತವಾಗಿ ಉದ್ಘಾಟನೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬಳ್ಳಾರಿ ಜಿಲ್ಲೆಯ ಮಹಿಳಾ ವಿದ್ಯಾರ್ಥಿನಿಲಯಗಳಿಗೆ ಭದ್ರತೆ ಒದಗಿಸುವ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೨೬ (೭೬೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಒಟ್ಟು ಮಹಿಳಾ ವಿದ್ಯಾರ್ಥಿನಿಲಯಗಳೆಷ್ಟು; ತಾಲ್ಲೂಕುವಾರು ವಿವರ ನೀಡುವುದು;

(ಆ) ಇದರಲ್ಲಿ ಎಷ್ಟು ಮಹಿಳಾ ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿವೆ; ಎಷ್ಟು ಬಾಡಿಗೆ ಕಟ್ಟಡಗಳನ್ನು ಹೊಂದಿದೆ; ಅವು ಯಾವುವು ಎಲ್ಲೆಲ್ಲಿ ಇವೆ; ವಿವರಿಸುವುದು;

(ಇ) ಈ ವಿದ್ಯಾರ್ಥಿನಿಲಯುದಲ್ಲಿರುವ ಮಹಿಳಾ ವಿದ್ಯಾರ್ಥಿಗಳ ಸುರಕ್ಷತೆಗಾಗಿ ಸರ್ಕಾರ ಯಾವ ಯಾವ ಭದ್ರತಾ ವ್ಯವಸ್ಥೆಯನ್ನು ಒದಗಿಸಿದೆ?

## ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿಕೆಯಿಂದ ಅರ್ಹ ಸಮುದಾಯ ವಂಚನೆಗೆ ಒಳಗಾಗುತ್ತಿರುವ ಬಗ್ಗೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೨೭ (೬೧೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುಳ್ಳು ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪತ್ರಗಳನ್ನು ನೀಡಿ ಸರ್ಕಾರಿ ಉದ್ಯೋಗ ಪಡೆಯುತ್ತಿರುವವರ ಅಂದಾಜು ವಿವರ ಸರ್ಕಾರಕ್ಕೆ ತಿಳಿದಿದೆಯೇ ; ತಿಳಿದಿದ್ದರೆ, ಕಳೆದ ೩ ವರ್ಷಗಳ ಅವಧಿಯಲ್ಲಿ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; (ವರ್ಷವಾರು, ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಇಂತಹ ಎಷ್ಟು ಪ್ರಕರಣಗಳಲ್ಲಿ ಯಾವ ಕ್ರಮಗಳನ್ನು ಅನುಸರಿಸಲಾಗಿದೆ ; (ವಿವರ ಒದಗಿಸುವುದು)

(ಇ) ಆಯಾ ಸಮುದಾಯಕ್ಕೆ ಅರ್ಹವಾಗಿ ಸಿಗಬೇಕಾದ ಉದ್ಯೋಗ ವಂಚನೆ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಇಲಾಖೆಯಡಿ ಕಾರ್ಯನಿರ್ವಹಿಸುವ ವಿವಿಧ ಸಂಸ್ಥೆಗಳಲ್ಲಿ ಖರೀದಿ ಬಗ್ಗೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೨೮ (೬೧೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುವ ಹಾಸ್ಟೆಲ್‌ಗಳು, ವಸತಿ

ಶಾಲೆಗಳು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸೇರಿದಂತೆ ಅಲ್ಲಿನ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಖರೀದಿಸಲಾದ ಸಾಮಗ್ರಿಗಳು ಎಷ್ಟು; ಯಾವ ರೀತಿಯ ಸಾಮಗ್ರಿಗಳನ್ನು ಖರೀದಿಸಲಾಗಿದೆ ; ಅದಕ್ಕಾಗಿ ವ್ಯಯಿಸಲಾದ ಹಣ ಎಷ್ಟು ; ಇವುಗಳನ್ನು ಪೂರೈಸಿದ ವ್ಯಕ್ತಿ, ಸಂಸ್ಥೆಗಳು ಯಾವುವು ; ಅವರುಗಳಿಗೆ ಪಾವತಿಸಲಾದ ಅನುದಾನ ಎಷ್ಟು ; (ಪ್ರತ್ಯೇಕವಾದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಖರೀದಿ ವ್ಯವಹಾರದಲ್ಲಿ ಹಣ ದುರುಪಯೋಗವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳು, ತನಿಖೆಯ ಪ್ರಗತಿ ಏನು ? (ಮಾಹಿತಿ ಒದಗಿಸುವುದು)

## ಅಲೆಮಾರಿ/ಅರೆ ಅಲೆಮಾರಿ ಜನಾಂಗಕ್ಕೆ ಮನೆಗಳನ್ನು ನೀಡುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೫೨೯ (೬೧೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ಅಲೆಮಾರಿ, ಅರೆ ಅಲೆಮಾರಿ ಜನಾಂಗಕ್ಕೆ ವಸತಿ ಸೌಕರ್ಯ ಕಲ್ಪಿಸಿಕೊಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಇದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ಎಷ್ಟು ಮನೆಗಳನ್ನು ವಿತರಿಸುವ ಉದ್ದೇಶ ಸರ್ಕಾರಕ್ಕೆ ಇದೆ ;

(ಇ) ಜಿಲ್ಲಾವಾರು ಮನೆಗಳನ್ನು ಹಂಚಿಕೆ ಮಾಡಲು ನಿಗದಿಪಡಿಸಲಾಗದ ಗುರಿ ಏನು ? (ವಿವರವಾದ ಮಾಹಿತಿ ನೀಡುವುದು)

## ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೫೩೦ (೬೧೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಪ್ರತಿ ವಿದ್ಯಾರ್ಥಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ೨೦೧೫–೧೬ನೇ ಸಾಲಿನಲ್ಲಿ ಹೆಚ್ಚುವರಿ ವಿದ್ಯಾರ್ಥಿಗಳನ್ನು ವಿದ್ಯಾರ್ಥಿ ನಿಲಯಗಳಿಗೆ ಸೇರಿಸಿಕೊಳ್ಳುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಈ) ವಿದ್ಯಾರ್ಥಿಗಳ ಸಂಖ್ಯೆಯನ್ನು ಕನಿಷ್ಠ ಎಷ್ಟಕ್ಕೆ ನಿಗದಿಪಡಿಸಲಾಗುವುದು ?

## ಮೇಲ್ವಿಚಾರಕರ ಹುದ್ದೆ ಭರ್ತಿ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೫೩೧ (೬೧೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ವಸತಿ ಶಾಲೆಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗೆ ಒಟ್ಟು ವಸತಿ ಶಾಲೆಯ ಮೇಲ್ವಿಚಾರಕರ ಹುದ್ದೆಗಳೆಷ್ಟು ;

(ಇ) ಪ್ರಸಕ್ತ ಎಷ್ಟು ಹುದ್ದೆ ಖಾಲಿ ಇವೆ, ಖಾಲಿ ಹುದ್ದೆಯನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮ ಏನು ? (ಸಂಪೂರ್ಣ ವಿವರ ನೀಡುವುದು)

## ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳ ಕೊರತೆ.

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) –**

೫೩೨ (೬೧೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ; (ಗ್ರಾಮ / ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರತಿ ಕೇಂದ್ರದಲ್ಲಿ ಯಾವ ಯಾವ ಚಿಕಿತ್ಸೆ ಮತ್ತು ಔಷಧಿಗಳನ್ನು ನೀಡಲಾಗುವುದು; ( ಅವುಗಳ ವಿವರ ನೀಡುವುದು)

(ಇ) ಸುಮಾರು ಕೇಂದ್ರಗಳಲ್ಲಿ ವೈದ್ಯಾಧಿಕಾರಿ / ಸಿಬ್ಬಂದಿಗಳು ಕಾರ್ಯನಿರ್ವಹಿಸದೆ ಇರುವಂತಹ ಪರಿಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಕೇಂದ್ರಗಳಲ್ಲಿ ಯಾವ ವ್ಯವಸ್ಥೆ ಮಾಡಲಾಗಿದೆ; ಅಧಿಕಾರಿ / ಸಿಬ್ಬಂದಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ಮಾಹಿತಿ ಒದಗಿಸುವುದು)

## ದಿಢೀರ್ ಸ್ಪಂದಿಸದ ಆಂಬುಲೆನ್ಸ್‌ಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೫೩೩ (೬೨೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ನಾಗರೀಕರು ದಿಢೀರ್ ಹೃದಯಘಾತಗಳು, ಅಪಘಾತಗಳು ಮತ್ತಿತರೆ ಆರೋಗ್ಯ ತೊಂದರೆಗೆ ಸಿಲುಕಿ, ಆಂಬುಲೆನ್ಸ್ ಸೇವೆಗಾಗಿ ದೂರವಾಣಿ ಮಾಡಿದಾಗ ತೀರಾ

ವಿಳಂಬ ಮಾಡುವುದು ಬಾರದಿರುವುದು ಅಥವಾ ಮೃತಪಟ್ಟರು ಆಂಬುಲೆನ್ಸ್‌ಗಳು ಬಾರದಿರುವ ಘಟನಾವಳಿಗಳು ಜರುಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಸ್ಪತ್ರೆಗಳಲ್ಲಿ ಆಂಬುಲೆನ್ಸ್‌ಗಳ ಕೊರತೆಯಿರುವುದು, ರಿಪೇರಿಯಾಗದೆ, ಬಳಕೆಯಾಗದೆ ಆಂಬುಲೆನ್ಸ್‌ಗಳು ಶೆಡ್ಡುಗಳಲ್ಲಿ ನಿಂತಿರುವ ಕಾರಣಗಳನ್ನು ಸಾರ್ವಜನಿಕರಿಗೆ ಆಸ್ಪತ್ರೆ ಸಿಬ್ಬಂದಿ ತಿಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಜಿಲ್ಲೆಗಳಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಬಹುತೇಕ ಮೆಡಿಕಲ್ ಎಕ್ವೀಪ್‌ಮೆಂಟ್‌ಗಳು ಕೆಟ್ಟು ಉಪಯೋಗವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಉತ್ತರ ಕರ್ನಾಟಕ ಗ್ರಾಮೀಣ ಭಾಗದ ನಾಗರೀಕರಿಗೆ ಕೂಡಲೇ ತಲುಪುವಂತಹ ಆಂಬುಲೆನ್ಸ್ ಸೇವೆಗಳನ್ನು ಒದಗಿಸಲು ಮತ್ತು ಕೆಟ್ಟಿರುವ ಮೆಡಿಕಲ್ ಎಕ್ವೀಪ್‌ಮೆಂಟ್‌ಗಳನ್ನು ಕೂಡಲೇ ದುರಸ್ಥಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರಿಸುವುದು)

## SCP / TSP ಅನುದಾನಗಳಿಗೆ ಬೇಡಿಕೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೫೩೪ (೬೨೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಉತ್ತರ ಕರ್ನಾಟಕ ಮತ್ತು ಹೈದರಾಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದವರು ವಾಸಿಸುವ ಸ್ಥಳಗಳಲ್ಲಿ ಕನಿಷ್ಠ ನಾಗರೀಕ ಸೌಲಭ್ಯಗಳನ್ನು ಒದಗಿಸಲು

SCP / TSP ಅನುದಾನಗಳನ್ನು ಬಯಸಿ ಎಷ್ಟು ಬೇಡಿಕೆಗಳು ಸರ್ಕಾರಕ್ಕೆ ಬಂದಿವೆ; (ಜಿಲ್ಲಾವಾರು ಮತ್ತು ಅನುದಾನಗಳ ಬೇಡಿಕೆಗಳ ವಿವರಗಳನ್ನು ನೀಡುವುದು)

ಆ) ಬಯಸಿದ ಬೇಡಿಕೆಗಳಿಗೆ ಅನುಸಾರವಾಗಿ ಅನುದಾನಗಳನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಾಂಪ್ರದಾಯಿಕ ವೃತ್ತಿ ಸಮುದಾಯಗಳಿಗೆ ಸಾಲ ನೀಡುವುದರ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) –**

೫೩೫ (೭೧೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

ಅ) ಸಾಂಪ್ರದಾಯಿಕ ವೃತ್ತಿ ಸಮುದಾಯಗಳಿಗೆ ಅವರ ವೃತ್ತಿ ಕೌಶಲ್ಯಗಳನ್ನು ಉನ್ನತೀಕರಿಸಲು ಹಾಗೂ ಆಧುನಿಕ ಉಪಕರಣಗಳನ್ನು ಕೊಳ್ಳಲು ರಿಯಾಯಿತಿ ಬಡ್ಡಿ ದರದಲ್ಲಿ ಸರ್ಕಾರ ಸಾಲ ನೀಡುತ್ತಿರುವುದು ನಿಜವೇ;

ಆ) ಇಂದಿನ ಯಾಂತ್ರಿಕ ಯುಗದಲ್ಲಿ ಸಾಂಪ್ರದಾಯಿಕ ವೃತ್ತಿಗಳನ್ನು ಕಳೆದುಕೊಂಡ ಗಾಣಿಗ ಮತ್ತು ಅಂತಹ ಇತರೆ ವೃತ್ತಿಜೀವನವೂ ಇಲ್ಲದೆ ಬೇರೆ ಇತರೆ ಆರ್ಥಿಕ ಆಧಾರವಿಲ್ಲದೆ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಅಂತಹ ಗಾಣಿಗ ಮತ್ತು ಇತರೆ ಸಮುದಾಯಗಳಿಗೂ ರಿಯಾಯಿತಿ ಬಡ್ಡಿ ದರ ಶೇ.೦% ಅಥವಾ ಶೇ.೨% ಬಡ್ಡಿ ದರದಲ್ಲಿ ಸಾಂಪ್ರದಾಯಿಕ ವೃತ್ತಿ ಕಳೆದುಕೊಂಡವರು ಇತರೆ ಸಣ್ಣಪುಟ್ಟ ಕೈಗಾರಿಕೆ ಅಥವಾ ಇತರೆ ಮಾರ್ಗದಲ್ಲಿ ಜೀವನ ರೂಪಿಸಿಕೊಳ್ಳಲು ಸರ್ಕಾರ ಸಹಾಯ ಹಸ್ತ ನೀಡುವುದೇ? (ಪೂರ್ಣ ವಿವರ ನೀಡುವುದು)

## ಖಾಸಗಿ ಕಟ್ಟಡಗಳ ಮೇಲೆ ಟಿ.ವಿ.ಟವರ್‌ಗಳನ್ನು ನಿರ್ಮಾಣ ಮಾಡಿರುವುದು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) –**

೫೩೬ (೭೧೦) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಖಾಸಗಿ ಕಟ್ಟಡಗಳ ಮೇಲೆ ಟಿ.ವಿ.ಟವರ್‌ಗಳನ್ನು ನಿರ್ಮಾಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅಂತಹ ಟವರ್‌ಗಳ ಸುತ್ತ ಮುತ್ತ ವಾಸಿಸುವ ಸಾರ್ವಜನಿಕರ ಆರೋಗ್ಯಕ್ಕೆ ಹಾನಿಕರ ಎಂಬುದನ್ನು ಸರ್ಕಾರ ಗಮನಿಸಿದೆಯೇ;

ಇ) ಅಂತಹ ಟವರ್‌ಗಳನ್ನು ಸ್ಥಾಪಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪರವಾನಗಿ ನೀಡಿದೆಯೇ;

ಈ) ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಅಂತಹ ಟವರ್‌ಗಳನ್ನು ತೆರವುಗೊಳಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ; ಹಾಗಿದ್ದರೆ, ಯಾವ ಕಾಲಾವದಿಯಲ್ಲಿ ಕಾರ್ಯಗತ ಮಾಡಲಾಗುವುದು?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಕಾಲೇಜುಗಳಿಗೆ ಸಿಟಿ ಬಸ್ ಸೌಲಭ್ಯ ನೀಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೩೭ (೭೧೬) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಾಲೇಜಿಗೆ ಎರಡರಂತೆ ಸರ್ಕಾರಿ ಸಿಟಿ ಬಸ್ಸುಗಳನ್ನು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಆ) ಪಟ್ಟಣ ಪ್ರದೇಶದಲ್ಲಿ ಉತ್ತಮವಾಗಿ ಬಸ್ಸು ಸೌಲಭ್ಯವಿರುವಾಗ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳು ಕಾಲೇಜು ಶಿಕ್ಷಣಕ್ಕೆ ಮೈಲುಗಟ್ಟಲೆ ನಡೆದು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು?

## ರಾಜ್ಯದಲ್ಲಿನ ಆಹಾರ ಗುಣಮಟ್ಟ, ಔಷಧಿಗಳ ಗುಣಮಟ್ಟ ಪರೀಕ್ಷಾ ಪ್ರಯೋಗಾಲಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೩೮ (೭೧೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆಹಾರ ಪದಾರ್ಥಗಳ ಮತ್ತು ಔಷಧಿಗಳ ಗುಣಮಟ್ಟವನ್ನು ಪರೀಕ್ಷಿಸಲು ಇರುವ ಪ್ರಯೋಗಾಲಯಗಳ ಸಂಖ್ಯೆ ಎಷ್ಟು; ಅವು ಯಾವುವು;

(ಆ) ಆಹಾರ ಪದಾರ್ಥಗಳ ಮತ್ತು ಔಷಧಿಗಳ ಗುಣಮಟ್ಟವನ್ನು ಪರೀಕ್ಷಿಸಲು ಇರುವ ಪ್ರಯೋಗಾಲಯಗಳಿಗೆ ಮಂಜೂರಾದ ಹುದ್ದೆಗಳೆಷ್ಟು; ಕೊರತೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಪ್ರಯೋಗಾಲಯವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಗುಣಮಟ್ಟ ಪರೀಕ್ಷೆಗೆ ಒಳಪಟ್ಟ ಆಹಾರ ಪದಾರ್ಥಗಳ ಮತ್ತು ಔಷಧಿಗಳ ಸಂಖ್ಯೆ ಎಷ್ಟು, ಅವು ಯಾವುವು; ಗುಣಮಟ್ಟದ ಪರೀಕ್ಷೆಯ ಫಲಿತಾಂಶವೇನು; ಗುಣಮಟ್ಟದಲ್ಲಿ ನ್ಯೂನತೆಗಳಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಪ್ರಕರಣವಾರು, ವರ್ಷಾವಾರು ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿನ ಪಡಿತರ ವಿತರಣಾ ಕೇಂದ್ರಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೩೯ (೭೧೫) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಸಹಕಾರಿ ಸಂಘಗಳಿಂದ ಮತ್ತು ಖಾಸಗಿಯವರಿಂದ ನಡೆಸಲ್ಪಡುತ್ತಿರುವ ಪಡಿತರ ವಿತರಣಾ ಕೇಂದ್ರಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ನಡೆಸಲ್ಪಡುತ್ತಿರುವ ಪಡಿತರ ವಿತರಣಾ ಕೇಂದ್ರಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊಬೈಲ್ ಪಡಿತರ ವಿತರಣಾ ಕೇಂದ್ರಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ಜಿಲ್ಲೆಯ ಕೆಲವೊಂದು ಗ್ರಾಮಾಂತರ ಪ್ರದೇಶಗಳಲ್ಲಿ ಮತ್ತು ಈ ದ್ವೀಪ ಪ್ರದೇಶಗಳಲ್ಲಿ ಪಡಿತರ ವಿತರಣಾ ಕೇಂದ್ರಗಳಿಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲವಾದಲ್ಲಿ ಕಾರಣವೇನು?

## ರಾಜ್ಯದಲ್ಲಿ ಪಡಿತರ ಚೀಟಿ ಪಡೆಯಲು ಮತದಾರರ ಗುರುತು ಚೀಟಿ ಕಡ್ಡಾಯಗೊಳಿಸಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೪೦ (೭೧೩) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಡಿತರ ಚೀಟಿ ವಿತರಣೆ ಮತ್ತು ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸುವಾಗ ಕುಟುಂಬ ಸದಸ್ಯರ ಮತದಾರ ಗುರುತು ಚೀಟಿಯನ್ನು ವೆಬ್‌ಸೈಟ್‌ಗಳಿಗೆ ಲಿಂಕ್ ಮಾಡುತ್ತಿರುವ ಅಗತ್ಯತೆ ಏನು;

(ಆ) ರಾಜ್ಯದಲ್ಲಿ ಹೊಸ ಪಡಿತರ ಚೀಟಿ ಪಡೆಯಲು ಹಾಗೂ ಪಡಿತರ ಚೀಟಿ ನವೀಕರಣಕ್ಕೆ ಹದಿನೆಂಟು ವರ್ಷ ಮೇಲ್ಪಟ್ಟ ಕುಟುಂಬ ಸದಸ್ಯರ ಮತದಾರರ ಗುರುತು ಚೀಟಿ ಕಡ್ಡಾಯಗೊಳಿಸಿರುವ ಕಾರಣವೇನು;

(ಇ) ರಾಜ್ಯದಲ್ಲಿ ಹೊಸ ಪಡಿತರ ಚೀಟಿ ಪಡೆಯಲು ಮನೆ ಸಂಖ್ಯೆ ಕಡ್ಡಾಯವಾದ ಹಿನ್ನೆಲೆಯಲ್ಲಿ ರೈತರು ಮತ್ತು ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

ಗಮನಿಸಿದ್ದಲ್ಲಿ ಹಿಂದಿನಂತೆ ಮನೆ ಇರುವ ಜಾಗದ ಸರ್ವೆ ನಂಬರ್ ದಾಖಲಿಸುವ ಮೂಲಕ ಹೊಸ ಪಡಿತರ ಚೀಟಿಯನ್ನು ನೀಡುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ ಕಾರಣವೇನು?

## ಗಂಗಾ ಕಲ್ಯಾಣ ಯೋಜನೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೪೧ (೭೧೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡವೇನು; ಗಂಗಾ ಕಲ್ಯಾಣ ಯೋಜನೆಯಡಿ ಕಾಮಗಾರಿಗಳನ್ನು ನಿರ್ವಹಿಸಲು ಇರುವ ಮಾರ್ಗಸೂಚಿಗಳೇನು; (ಪ್ರತಿ ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಕೋರಿ ಬಂದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಆಯ್ಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಆಯ್ಕೆಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ವರ್ಷಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು; ಕಾಮಗಾರಿ ಪ್ರಾರಂಭಗೊಂಡು ಇನ್ನೂ ಪೂರ್ಣಗೊಳ್ಳದ ಪ್ರಕರಣಗಳೆಷ್ಟು; ಇನ್ನೂ ಪ್ರಾರಂಭವಾಗದ ಕಾಮಗಾರಿಗಳ ಸಂಖ್ಯೆ ಎಷ್ಟು ? (ವರ್ಷವಾರು, ತಾಲ್ಲೂಕುವಾರು, ಪ್ರಕರಣವಾರು ವಿವರ ನೀಡುವುದು)

## ಡಾ: ನಂಜುಂಡಪ್ಪ ವರದಿಯ ಅನುಷ್ಠಾನದಲ್ಲಿ ಆದ ಪ್ರಗತಿ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೪೨ (೭೨೦) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಡಾ: ನಂಜುಂಡಪ್ಪ ವರದಿಯ ಅನುಷ್ಠಾನಕ್ಕೆ ಸರ್ಕಾರ ಹಾಕಿಕೊಂಡಿರುವ ಕಾಲಮಿತಿ ಎಷ್ಟು;

(ಆ) ಕಳೆದ ೩ ವರ್ಷಗಳಲ್ಲಿ ಈ ವರದಿಯ ಅನುಷ್ಠಾನದ ಅಡಿಯಲ್ಲಿ ಹಂಚಿಕೆಯಾದ ಹಾಗೂ ಖರ್ಚಾದ ಹಣದ ಮಾಹಿತಿಯನ್ನು ತಾಲ್ಲೂಕುವಾರು ಒದಗಿಸುವುದು ; ಈ ವರದಿಯ ಅನುಷ್ಠಾನಕ್ಕೆ ಬಿಡುಗಡೆಗೊಳಿಸಲಾಗುವ ಹಣವು ಸಾಮಾನ್ಯ ಆಯವ್ಯಯದಲ್ಲಿ ಇಲಾಖೆಗಳ ಮುಖಾಂತರ ಬಿಡುಗಡೆ ಮಾಡಲಾಗುವುದೇ ಅಥವಾ ಇದಕ್ಕಾಗಿಯೇ ಬೇರೆಯದಾದ ಹಂಚಿಕೆಯ ಶೀರ್ಷಿಕೆ ಇದೆಯೇ ತಿಳಿಸುವುದು ;

(ಇ) ಈ ವರದಿಯ ಅನುಷ್ಠಾನದಲ್ಲಿ ಆದ ಪ್ರಗತಿಯ ಪರಿಶೀಲನೆ ಕೈಗೊಳ್ಳಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಇದರ ಬಗ್ಗೆ ವಿವರಗಳನ್ನು ಒದಗಿಸುವುದು ?

## ರಾಜ್ಯದಲ್ಲಿ ಬೈಕಿನಲ್ಲಿ ಹಿಂಬದಿ ಕೂರುವ ಸವಾರರಿಗೆ ಹೆಲ್ಮೆಟ್ ಧರಿಸಬೇಕಾದ ನಿಯಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೪೩ (೭೨೧) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೈಕ್ ಸವಾರರಿಗೆ ಹೆಲ್ಮೆಟ್ ಧರಿಸುವುದನ್ನು ಕಡ್ಡಾಯ ಮಾಡಲು ಸುಪ್ರಿಂ ಕೋರ್ಟ್ ನ್ಯಾಯಮೂರ್ತಿಗಳ ಸಮಿತಿ ಶಿಫಾರಸ್ಸು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಿತಿಯ ಶಿಫಾರಸ್ಸಿನ ಪ್ರಕಾರ ಬೈಕಿನಲ್ಲಿ ಕೂರುವ ಹಿಬ್ಬಂದಿ ಸವಾರರು ಹೆಲ್ಮೆಟ್ ಧರಿಸಬೇಕಾಗಿದ್ದು, ಸರ್ಕಾರ ಈ ನಿಯಮವನ್ನು ಜಾರಿಗೆ ತರಲು ಯೋಚಿಸಿದೆಯೇ;

(ಆ) ತರುವುದಾದರೆ ಯಾವಾಗಿನಿಂದ ಜಾರಿಗೆ ತರಲಾಗುವುದು?

## ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಮಾಜಿ ಸೈನಿಕರಿಗೆ ದೊರಕಬೇಕಾದ ಸೇವಾ ಸೌಲಭ್ಯಗಳ ಬಗ್ಗೆ.

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೪೪ (೭೧೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಮಾಜಿ ಸೈನಿಕರು ನೇಮಕಗೊಂಡಿದ್ದು, ಮಾಜಿ ಸೈನಿಕರಿಗೆ ನಿವೃತ್ತಿಯ ನಂತರ ಅವರ ಸೇನೆಯ ಸೇವೆಯನ್ನು ಪರಿಗಣಿಸಿ ನೀಡಬೇಕಾದ ಸೌಲಭ್ಯವನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ರೀತಿಯ ತಾರತಮ್ಯಕ್ಕೆ ಹಾಗೂ ಕೇಂದ್ರ ಸರ್ಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಮಾಜಿ ಸೈನಿಕರಿಗೆ ಇರುವ ಸೇವಾ ನೀತಿ ನಿಯಮಗಳನ್ನು ಅನುಸರಿಸದಿರಲು ಕಾರಣಗಳೇನು;

ಇ) ಮಾಜಿ ಸೈನಿಕರಿಗೆ ನ್ಯಾಯಸಮ್ಮತವಾಗಿ ದೊರಕಬೇಕಾದ ಸೇವಾ ಸೌಲಭ್ಯಗಳನ್ನು ತಕ್ಕ ಸಮಯದಲ್ಲಿ ನೀಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು?

## ಬೆಂಗಳೂರಿನ ಪ್ರತಿಷ್ಠಿತ ಮಿಂಟೋ ಕಣ್ಣಿನ ಆಸ್ಪತ್ರೆಯಲ್ಲಿ ಮೆಡಿಕಲ್ ಸಲಕರಣೆಗಳನ್ನು ಮತ್ತು ಔಷಧಿಗಳನ್ನು ಖರೀದಿಯಲ್ಲಿರುವ ಗೊಂದಲ ಪರಿಸ್ಥಿತಿ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೪೫ (೭೧೯) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಪ್ರತಿಷ್ಠಿತ ಮಿಂಟೋ ಕಣ್ಣಿನ ಆಸ್ಪತ್ರೆಯ ನಿರ್ದೇಶಕರ ಹುದ್ದೆಗೂ ಹಾಗೂ ಬೆಂಗಳೂರು ಮೆಡಿಕಲ್ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆಯ ನಿರ್ದೇಶಕರ ಹುದ್ದೆಗೂ ಇರುವ ಅಂತರವೇನು ;

(ಆ) ಮಿಂಟೋ ಆಸ್ಪತ್ರೆಯು ಒಂದು ಕಣ್ಣಿನ ವಿಶೇಷ ಆಸ್ಪತ್ರೆಯಾಗಿದ್ದು, ಇದಕ್ಕೆ ಬೇಕಾಗುವ ಮೆಡಿಕಲ್ ಸಲಕರಣೆಗಳನ್ನು ಮತ್ತು ಔಷಧಿಗಳನ್ನು ಖರೀದಿ ಮಾಡಲು ಇರುವ ಮಾನದಂಡಗಳೇನು ;

(ಇ) ಈ ಆಸ್ಪತ್ರೆಯಲ್ಲಿ ನೇತ್ರದಾನಿಗಳಿಂದ ಪಡೆದ ಕಣ್ಣನ್ನು ದಾನ ಪಡೆಯುವವರಿಗೆ ಅಳವಡಿಸಲು ಆ ವ್ಯಕ್ತಿಯ ಕಣ್ಣಿನ ಗಾತ್ರಕ್ಕೆ ದಾನಿಯು ಕಣ್ಣನ್ನು ಕತ್ತರಿಸಲು ಇರುವ ಡಿಸ್ಪೋಜಬಲ್ ಕಾರ್ನಿಯಲ್ ಟ್ರೆಫೈನಾನ್ಸಿ ಸಲಕರಣೆಯನ್ನು ಖರೀದಿಸಲು ೪ ತಿಂಗಳಿನಿಂದ ಕಡತ ಪರಿಶೀಲನೆಯಲ್ಲಿದ್ದು, ಈಗ ಒಂದು ವಾರದ ಹಿಂದೆ ಕಡತ ಕಳೆದು ಹೋಗಿರುವುದಾಗಿ ತಿಳಿದುಬಂದಿದೆ. ಇದರಿಂದ ಬಡರೋಗಿಗಳಿಗೆ ತುಂಬಾ ತೊಂದರೆಯಾಗಿದ್ದು, ಖಾಸಗಿ ಆಸ್ಪತ್ರೆಗೆ ಹೋಗುವ ಸ್ಥಿತಿಯಲ್ಲಿ ಇಲ್ಲದಿರುವ ಈ ರೋಗಿಗಳ ಬಗ್ಗೆ ಸರ್ಕಾರದ ಕ್ರಮವೇನು ;

(ಈ) ಈ ಗೊಂದಲದ ಪರಿಸ್ಥಿತಿಯನ್ನು ತಪ್ಪಿಸಲು ಈಗಿರುವ ಮೆಡಿಕಲ್ ಸಲಕರಣೆಗಳನ್ನು ಖರೀದಿ ಪದ್ಧತಿಯನ್ನು ಬೆಂಗಳೂರು ಮೆಡಿಕಲ್ ಕಾಲೇಜು ನಿರ್ದೇಶನಾಲಯದಿಂದ ಮಿಂಟೋ ಆಸ್ಪತ್ರೆಗೆ ವರ್ಗಾಯಿಸಲು ಸರ್ಕಾರ ಕ್ರಮ ಜರುಗಿಸಲಾಗುವುದೇ ?

## ಮೆರಿಟ್ ಮತ್ತು ರೋಸ್ಟರ್ ಪದ್ದತಿಯಲ್ಲಿ ಕ್ರೈಸ್ ಸಂಸ್ಥೆ ಮೂಲಕ ನೇಮಕವಾದ ಶಿಕ್ಷಕ ಮತ್ತು ಶಿಕ್ಷಕೇತರ ಸೇವಾ ಸಕ್ರಮಾತಿ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೫೪೬ (೭೧೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಕ್ರೈಸ್ ಸಂಸ್ಥೆ ಮೂಲಕ ನೇಮಕಗೊಂಡ ಮತ್ತು ನ್ಯಾಯಾಲಯ ಆದೇಶದೊಂದಿಗೆ ಮುಂದುವರಿಯುತ್ತಿರುವ ಶಿಕ್ಷಕ ಮತ್ತು ಶಿಕ್ಷಕೇತರ ಒಟ್ಟು ಸಿಬ್ಬಂದಿಯ ಸಂಖ್ಯೆ ಎಷ್ಟು;

(ಆ) ನ್ಯಾಯಾಲಯದ ಆದೇಶದಂತೆ ಇವರ ಸೇವಾ ಸಕ್ರಮಾತಿ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಇ) ಈ ಸೇವಾ ಸಕ್ರಮಾತಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು?

## ಗ್ರಾಹಕರ ಹಿತಾಸಕ್ತಿ ಕಾಪಾಡುವ ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೪೭ (೭೫೧) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಗ್ರಾಹಕರ ಹಿತಾಸಕ್ತಿ ಕಾಪಾಡಲು ಮತ್ತು ಕುಂದು ಕೊರತೆಗಳನ್ನು ನಿವಾರಿಸಲು ಯಾವ ಜಿಲ್ಲೆಯಲ್ಲಿ ಜಿಲ್ಲಾ ಗ್ರಾಹಕರ ನ್ಯಾಯಾಲಯವನ್ನು ಸ್ಥಾಪಿಸಿದೆ ;

(ಆ) ಪ್ರತಿ ನ್ಯಾಯಾಲಯದಲ್ಲಿ ಇರಬೇಕಾದ ಸದಸ್ಯರು ಯಾರ್‍ಯಾರು ; ಎಷ್ಟು ಜಿಲ್ಲೆಗಳಲ್ಲಿ ಸದಸ್ಯರನ್ನು ಭರ್ತಿ ಮಾಡಲಾಗಿದೆ ;

(ಇ) ಕಾರ್ಯ ನಿರ್ವಹಿಸಲು ಸಾಧ್ಯವಾಗದ ಸಂದರ್ಭದಲ್ಲಿ ಗ್ರಾಹಕರಿಗೆ ನ್ಯಾಯ ನೀಡಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು ?

## ಅಂಗವಿಕಲರಿಗೆ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಹಣ ಮೀಸಲಿರಿಸುವ ವಿಚಾರ

**ಶ್ರೀ ಭಾನುಪ್ರಕಾಶ್** (ವಿಧಾನಸಭೆಯಿಂದ ಚುನಾಯಿತರಾದವರು) –

೫೪೮ (೭೨೩) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಂಗವಿಕಲರಿಗಾಗಿ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಶೇ ೩% ಹಣಮೀಸಲಿಡುವ ಬಗ್ಗೆ ಸರ್ಕಾರಿ ಆದೇಶ ಇದೆಯೇ;

(ಆ) ಈ ಆದೇಶದಂತೆ ಶಾಸಕರ ನಿಧಿಯಲ್ಲಿ ಮೀಸಲಿಟ್ಟ ಹಣದ ಒಟ್ಟು ಮೊತ್ತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಅಂಗವಿಕಲರಿಗೆ ಮೀಸಲಿಟ್ಟ ಈ ನಿಧಿಯು ಯಾವ ರೀತಿ ಕಾರ್ಯಕ್ರಮಗಳಿಗೆ ಬಳಕೆ ಆಗುವುದು?

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಬಿಡುಗಡೆಯಾದ ಅನುದಾನ ಮತ್ತು ಖರ್ಚು ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೪೯ (೭೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ೨೦೧೩-೧೪ ಮತ್ತು ೨೦೧೪-೧೫ನೇ ಸಾಲಿನಲ್ಲಿ ಮೀಸಲಿಟ್ಟ ಒಟ್ಟು ಹಣ ಎಷ್ಟು; (ಇಲಾಖಾವಾರು ವಿವರ ಒದಗಿಸುವುದು)

(ಆ) ಈ ಎರಡು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಖರ್ಚು ಮಾಡಿದ ಹಣವೆಷ್ಟು; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಹಣಕಾಸು ಇಲಾಖೆಯಿಂದ ಪ್ರತಿಯೊಂದು ಇಲಾಖೆಗೆ ಬಿಡುಗಡೆಯಾದ ಅನುದಾನದಲ್ಲಿ ಪೂರ್ಣ ಅನುದಾನ ಖರ್ಚು ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣ ಸಹಿತ ಇಲಾಖಾವಾರು ಮಾಹಿತಿ ನೀಡುವುದು;

(ಈ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಜನಸಂಖ್ಯೆ ಆಧಾರದ ಮೇಲೆ ಖರ್ಚು ಮಾಡಬೇಕೆಂದು ಕಾನೂನು ಜಾರಿಯಾಗಿದ್ದರೂ, ಅನುದಾನ ಬಳಕೆಯಲ್ಲಿ ಯಾವ ಯಾವ ಇಲಾಖೆಗಳು ಹಿಂದೆ ಬಿದ್ದಿವೆ? (ಕಾರಣ ಸಹಿತ ವಿವರ ಒದಗಿಸುವುದು)

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದ ವಿವರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೫೦ (೭೨೪) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರತಿ ಜಿಲ್ಲೆಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಕಾರ್ಯಕ್ರಮದಲ್ಲಿ ೨೦೧೨-೨೦೧೩, ೨೦೧೩-೧೪ ಮತ್ತು ೨೦೧೪-೧೫ ರಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಅನುಷ್ಠಾನಾಧಿಕಾರಿಗಳನ್ನು ನಿಗಧಿಪಡಿಸಿ ಹಣ ಬಿಡುಗಡೆ ಮಾಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸಂಪೂರ್ಣವಾಗಿ ಮುಕ್ತಾಯವಾಗಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಸದರಿ ಕಾಮಗಾರಿಗಳಿಗೆ ಒದಗಿಸಲಾಗಿರುವ ಅನುದಾನ ಎಷ್ಟು; ವೆಚ್ಚವಾಗಿರುವ ಮೊತ್ತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯನ್ನು ಅನುಷ್ಠಾನಗೊಳಿಸಲು ಸರ್ಕಾರ ಪ್ರತ್ಯೇಕ ನಿರ್ದೇಶನಾಲಯವನ್ನು ಪ್ರಾರಂಭಿಸಲು ಕಾರ್ಯ ಪ್ರವೃತ್ತವಾಗುವುದೇ ?

## ಶಿವಮೊಗ್ಗದಲ್ಲಿನ ಆಯುರ್ವೇದ ಮಹಾವಿದ್ಯಾನಿಲಯ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) –**

೫೫೧ (೭೫೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗದಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಆಯುರ್ವೇದ ಮಹಾವಿದ್ಯಾನಿಲಯಕ್ಕೆ ಕೇಂದ್ರೀಯ ಭಾರತೀಯ ವೈದ್ಯ ಪರಿಷತ್ತಿನಿಂದ ಅನುಮತಿ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಮಹಾವಿದ್ಯಾನಿಲಯ ಪ್ರಾರಂಭಿಸಲು ನಿಗದಿಪಡಿಸಿರುವ ಜಾಗವನ್ನು ಸಂಪೂರ್ಣವಾಗಿ ಸ್ವಾಧೀನಪಡಿಸಿಕೊಂಡು ಆರಂಭಿಸಿರುವ ಕಾಮಗಾರಿಗಳು ಯಾವುವು ; ಈವರೆಗೆ ಖರ್ಚಾಗಿರುವ ಮೊತ್ತ ಎಷ್ಟು; (ವಿವರ ನೀಡುವುದು)

(ಇ) ಸದರಿ ಮಹಾವಿದ್ಯಾನಿಲಯವನ್ನು ಪ್ರಾರಂಭಿಸಲು ೨೦೧೫-೧೬ನೇ ಸಾಲಿನಲ್ಲಿ ಸರ್ಕಾರ ಮೀಸಲಿಟ್ಟಿರುವ ಹಣ ಎಷ್ಟು ;

(ಈ) ಮಹಾವಿದ್ಯಾನಿಲಯದಲ್ಲಿ ಆಸ್ಪತ್ರೆಗೆ ಮತ್ತು ಮಹಾವಿದ್ಯಾನಿಲಯಕ್ಕೆ ಮಂಜೂರಾದ ಹುದ್ದೆಗಳು ಎಷ್ಟು ಭರ್ತಿ ಮಾಡಿದ ಹುದ್ದೆಗಳು ಎಷ್ಟು ? (ವಿವರ ನೀಡುವುದು)

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೫೫೨ (೭೩೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಜಿಲ್ಲಾ ಪಂಚಾಯತ್‌ದಿಂದ ನೇಮಕಗೊಂಡ ಎಷ್ಟು ನೌಕರರನ್ನು ಖಾಯಂಗೊಳಿಸಲಾಗಿದೆ ;

(ಆ) ಗುತ್ತಿಗೆ ಆಧಾರದಲ್ಲಿ ನೇಮಕಗೊಂಡ ನೌಕರರನ್ನು ಖಾಯಂ ಮಾಡಲು ಅನುಸರಿಸಿದ ನೇಮಕಾತಿ ನಿಯಮಾವಳಿಗಳು (ಸಿ ಅಂಡ್ ಆರ್) ಯಾವುವು ;

(ಇ) ಹೊರಗುತ್ತಿಗೆ ನೌಕರರನ್ನು ಖಾಯಂ ಮಾಡುವಾಗ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಯಾವ ಮಾನದಂಡಗಳನ್ನು ನಿಗದಿಪಡಿಸಲಾಗಿದೆ ;

(ಈ) ಕನ್ನಡ ಮಾಧ್ಯಮದಲ್ಲಿ ಓದಿದವರನ್ನು ಇಂಗ್ಲೀಷ್ ಮಾಧ್ಯಮದಲ್ಲಿ ಬೋಧಿಸಲು ನೇಮಕಗೊಳಿಸಿ ಆದೇಶ ಹೊರಡಿಸಲಾಗಿದೆಯೇ ;

(ಉ) ಹಾಗಿದ್ದಲ್ಲಿ, ಬೇರೆ ಮಾಧ್ಯಮದಲ್ಲಿ ಓದಿದವರನ್ನು ಖಾಯಂಗೊಳಿಸಲು ಬಾಕಿ ಇರುವ ಪ್ರಕರಣಗಳೆಷ್ಟು ?

## ಹುಬ್ಬಳ್ಳಿ ತಾಲ್ಲೂಕು ಉಣಕಲ್ಲದ ವಿದ್ಯಾರ್ಥಿನಿಲಯದ ಬಾಡಿಗೆ ಹೆಚ್ಚಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೫೫೩ (೭೩೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯು ವತಿಯಿಂದ ನಡೆಸಲ್ಪಡುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ; ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಜಿಲ್ಲಾವಾರು ಮಾಹಿತಿ ನೀಡುವುದು

(ಆ) ಈ ವಿದ್ಯಾರ್ಥಿನಿಲಯಗಳಲ್ಲಿ ಬಾಡಿಗೆ ಪುನರ್‌ನಿಗಧಿಗೊಳಿಸಲು ಸರ್ಕಾರಕ್ಕೆ ಅಥವಾ ಇಲಾಖೆಗೆ ಎಷ್ಟು ಪ್ರಸ್ತಾವನೆಗಳು ಬಂದಿವೆ ;

(ಇ) ಧಾರವಾಡ ಜಿಲ್ಲೆ ಹುಬ್ಬಳ್ಳಿ ತಾಲ್ಲೂಕಿನ ಉಣಕಲ್ಲಿನಲ್ಲಿ ನಡೆಯುತ್ತಿರುವ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಬಾಡಿಗೆ ಪುನರ್‌ನಿಗಧಿಗೊಳಿಸಲು ಇಲಾಖೆಗೆ ಪ್ರಸ್ತಾವನೆ ಬಂದು ಎಷ್ಟು ತಿಂಗಳುಗಳಾಯಿತು ;

(ಈ) ಇದೂವರೆಗೂ ಬಾಡಿಗೆ ಪುನರ್‌ನಿಗಧಿಗೊಳಿಸದಿರಲು ಕಾರಣಗಳೇನು ;

(ಉ) ಬಾಡಿಗೆ ಪುನರ್‌ನಿಗದಿ ವಿಳಂಬವಾಗುತ್ತಿರುವುದರಿಂದ ಕಟ್ಟಡದ ಮಾಲೀಕರು ಕಟ್ಟಡಗಳನ್ನು ಖಾಲಿ ಮಾಡಲು ಒತ್ತಾಯಿಸುತ್ತಿರುವುದು ನಿಜವೇ ;

(ಊ) ಹಾಗಿದ್ದಲ್ಲಿ, ಈ ಸಮಸ್ಯೆ ಪರಿಹರಿಸಿ ಬಾಡಿಗೆ ಪುನರ್‌ನಿಗಧಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಿಯೋನಿಕ್ಸ್ ಸಂಸ್ಥೆಯ ಕಾರ್ಯನಿರ್ವಹಣೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೫೫೪ (೭೩೧) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಿಯೋನಿಕ್ಸ್ ಸಂಸ್ಥೆಯು ಯಾವ ಯಾವ ಕೆಲಸಗಳನ್ನು ಈಗ ನಿರ್ವಹಿಸುತ್ತಿದೆ ;

(ಆ) ಸರಕಾರವು ಅವರಿಗೆ ನಿರ್ವಹಿಸಿದ ಕೆಲಸಗಳನ್ನು ಸಂಸ್ಥೆಯು ಬೇರೆ ಏಜೆನ್ಸಿಯವರಿಗೆ ವಹಿಸಿರುವುದು ನಿಜವೇ ;

(ಇ) ಈ ರೀತಿ ಮಾನವಶಕ್ತಿ ಸೇವೆಯನ್ನು ಬೇರೆ ಏಜೆನ್ಸಿಗಳಿಗೆ ವಹಿಸಲು ಸರಕಾರ ಅನುಮೋದನೆ ನೀಡಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಯಾವ ಏಜೆನ್ಸಿಗಳಿಗೆ ಉಪಗುತ್ತಿಗೆ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ವಿವರಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೫೫೫ (೭೩೩) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ವೈದ್ಯಕೀಯ ಹಾಗೂ ದಂತವೈದ್ಯಕೀಯ ಆಯುರ್ವೇದಿಕ್, ಯುನಾನಿ ಹಾಗೂ ಇತರೆ ಅರೆ ವೈದ್ಯಕೀಯ ಕಾಲೇಜುಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಾಲೇಜುಗಳಲ್ಲಿ ಲಭ್ಯವಿರುವ ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ಸೀಟುಗಳ ಸಂಖ್ಯೆ ಎಷ್ಟು ; (ಕೋರ್ಸ್‌ವಾರು ಮಾಹಿತಿ ನೀಡುವುದು)

(ಇ) ಈ ಕೋರ್ಸುಗಳಿಗೆ ನಿಗದಿಪಡಿಸಿದ ಶುಲ್ಕದ ವಿವರಗಳನ್ನು ನೀಡುವುದು ?

## ಬೆಳಗಾವಿಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೫೫೬ (೭೩೫) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎರಡನೇ ರಾಜಧಾನಿ ಎನಿಸಿಕೊಳ್ಳುವ ಬೆಳಗಾವಿ ನಗರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಬೆಳಗಾವಿ ನಗರವು ಕಂದಾಯ, ವಿಭಾಗದ ವಿಭಾಗೀಯ ಕಛೇರಿಯನ್ನು ಹೊಂದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಇಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಪಡಿತರ ಪಡೆಯಲು ಎ.ಪಿ.ಎಲ್. ಜನರು ನಿರಾಸಕ್ತಿ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** (ಪದವೀಧರರ ಕ್ಷೇತ್ರದಿಂದ **ಚುನಾಯಿತರಾದವರು**) –

೫೫೭ (೭೩೮) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ದಿನಗಳಲ್ಲಿ ವಸ್ತುಗಳ ಬೆಲೆ ಗಗನಕ್ಕೇರಿರುವ ಸಂದರ್ಭದಲ್ಲಿ ಸರ್ಕಾರವೇ ಕಡಿಮೆ ವೆಚ್ಚದಲ್ಲಿ ಪಡಿತರ ವಿತರಣೆ ಮಾಡಲು ಮುಂದಾದರೂ ಎ.ಪಿ.ಎಲ್. ಪಡಿತರದಾರರು ಪಡಿತರ ಪಡೆಯಲು ಮುಂದೆ ಬರುತ್ತಿಲ್ಲ ಎಂಬ ಸಂಗತಿ ನಿಜವೇ ;

(ಆ) ಪ್ರಸ್ತುತ ಪಡಿತರ ದರ ಹೆಚ್ಚಿಗೆ ಇರುವುದೆಂಬ ಕಾರಣದಿಂದ ಜನರು ಮುಂದೆ ಬರುತ್ತಿಲ್ಲವೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಎ.ಪಿ.ಎಲ್. ಕಾರ್ಡುದಾರರು ಪಡಿತರ ಆಹಾರ ಧಾನ್ಯ ಪಡೆಯಲು ಯಾವ–ಯಾವ ನಿಯಮಗಳನ್ನು ಅನುಸರಿಸಬೇಕು ;

(ಈ) ಪ್ರತಿಯೊಂದು ಜಿಲ್ಲೆಯಲ್ಲಿ ಎಷ್ಟು ಎ.ಪಿ.ಎಲ್. ಕಾರ್ಡುದಾರರು ಪಡಿತರ ಕಾಳು ಬೇಕು ಎಂದು ತಿಳಿಸಿರುವರು ?

## ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಕಾರಿಮನಿ (ಶ್ರೀ ಕ್ಷೇತ್ರ ಸೂಗಲ)ಯಲ್ಲಿ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ಬಿ.ಸಿ.ಎಮ್. ವಸತಿ ನಿಲಯ ಪ್ರಾರಂಭಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) –**

೫೫೮ (೭೩೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಸೂಗಲ (ಕಾರಿಮನಿ)ದಲ್ಲಿ ಹೈಸ್ಕೂಲ್ ವಿದ್ಯಾರ್ಥಿಗಳಿಗಾಗಿ ಬಿ.ಸಿ.ಎಮ್. ಮೆಟ್ರಿಕ್ ಪೂರ್ವ ಹಾಸ್ಟೆಲ್ ಇಲ್ಲದೆ ಇರುವುದರಿಂಧ ಸೂಗಲ, ಕಾರಿಮನಿ, ದುಂಡನಕೊಪ್ಪ, ಮಲ್ಲೂರ ಹಾಗೂ ಸೋಮಾಪುರ ಗ್ರಾಮದ ಬಡ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಲ್ಲಿ ಮೆಟ್ರಿಕ್ ಪೂರ್ವ ಬಾಲಕರ ಹಾಸ್ಟೆಲ್ ಪ್ರಾರಂಭಿಸಲು ಎಲ್ಲ ಮೂಲಭೂತ ಸೌಕರ್ಯಗಳು ಇದ್ದು ಮುಂದಿನ ವರ್ಷದಿಂದ ಹಾಸ್ಟೆಲ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ನರ್ಮ್ ಯೋಜನೆ ಅಡಿಯಲ್ಲಿ ಕೇಂದ್ರ ಸರ್ಕಾರ ಬಸ್‌ಗಳನ್ನು ಒದಗಿಸಿದ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) –**

೫೫೯ (೭೩೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರವು ರಾಜ್ಯಕ್ಕೆ ನರ್ಮ್ ಯೋಜನೆ ಅಡಿಯಲ್ಲಿ ಕಳೆದ ವರ್ಷ ಹಾಗೂ ಈ ವರ್ಷ ಎಷ್ಟು ಬಸ್‌ಗಳನ್ನು ಒದಗಿಸಲಾಗಿದೆ ;

(ಆ) ಕೇಂದ್ರದಿಂದ ಬಂದ ಬಸ್‌ಗಳನ್ನು ಯಾವ-ಯಾವ ಜಿಲ್ಲೆಗೆ ಎಷ್ಟು-ಎಷ್ಟು ಬಸ್‌ಗಳನ್ನು ಒದಗಿಸಲಾಗಿದೆ ;

(ಇ) ಬೆಳಗಾವಿ ಜಿಲ್ಲೆಗೆ ಎಷ್ಟು ಬಸ್‌ಗಳನ್ನು ಒದಗಿಸಲಾಗಿದೆ ;

(ಈ) ಬೈಲಹೊಂಗಲ-ಬೆಳಗಾವಿ, ಬೈಲಹೊಂಗಲ-ಧಾರವಾಡ ತಡೆ ರಹಿತ ಬಸ್‌ಗಳನ್ನು ಓಡಿಲು ಈ ಬಸ್‌ಗಳ ಬೈಲಹೊಂಗಲ ಘಟಕಕ್ಕೆ ಕೊಡಲಾಗುವುದೇ ;

(ಉ) ಬಸ್‌ಗಳ ಕೊರತೆಯಿಂದ ಮಂಜೂರಾದ ಬೈಲಹೊಂಗಲ-ಶಿವಯೋಗಮಂದಿರ ಬಸ್ ಸಂಚಾರ ನಿಲ್ಲಿಸಿದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬೈಲಹೊಂಗಲ ಘಟಕದಲ್ಲಿ ಎರಡು ದಿನ ಬಸ್ ಓಡಿಸಿ ನಂತರ ನಿಲ್ಲಿಸಿ ಮತ್ತೆ ಓಡಿಸಿ ಆ ಮಾರ್ಗ ಲಾಭದಾಯಕವಿಲ್ಲವೆಂದು ಬಸ್ ಸಂಚಾರ ಸ್ಥಗಿತಗೊಳಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ಬೈಲಹೊಂಗಲ ಘಟಕವನ್ನು ಪ್ರಾಯೋಗಿಕವಾಗಿ ಖಾಸಗೀಕರಣ ಮಾಡಲು ಸರ್ಕಾರ ಚಿಂತಿಸುತ್ತಿದೆಯೇ ; ಈ ಘಟಕದಲ್ಲಿ ಯಾವುದೇ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು ರಸ್ತೆ ಸ್ವಚ್ಛತೆ ಮತ್ತು ವೇಳೆಗೆ ಸರಿಯಾಗಿ ಬಸ್ ಬಿಡದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಜ್ಯದಲ್ಲಿ ವೈದ್ಯಕೀಯ ಸೀಟುಗಳ ಲಭ್ಯತೆ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ** (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) –

೫೬೦ (೭೩೬) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈ ವರ್ಷ ಎಷ್ಟು ವೈದ್ಯಕೀಯ ಸೀಟುಗಳು ಲಭ್ಯವಿರುತ್ತವೆ ; (ಕಾಲೇಜುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಡೀಮ್ಡ್ (ಮೆಡಿಕಲ್) ಯುನಿವರ್ಸಿಟಿಗಳು ಇರುತ್ತವೆ ; ಪ್ರತಿಯೊಂದು ಡೀಮ್ಡ್ ಯುನಿವರ್ಸಿಟಿಯ ಮೆಡಿಕಲ್ ಕಾಲೇಜಿನಲ್ಲಿ ಸರ್ಕಾರಿ ಕೋಟಾದಲ್ಲಿ ಲಭ್ಯವಿರುವ ಸೀಟುಗಳು ಎಷ್ಟು ;

(ಇ) ಪ್ರತಿಯೊಂದು ಕಾಲೇಜಿನಲ್ಲಿರುವ ಕಾಮೆಡ್. ಕೆ ಸೀಟುಗಳು ಎಷ್ಟು ?

## ಡೆಂಗ್ಯೂ ಜ್ವರ ವ್ಯಾಪಕವಾಗಿ ಹರಡಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ** (ನಾಮನಿರ್ದೇಶನ ಹೊಂದಿದವರು) –

೫೬೧ (೭೪೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜನವರಿ ೨೦೧೫ ರಿಂದ ಜೂನ್‌ರವರೆಗೆ ಡೆಂಗ್ಯೂ ಜ್ವರದಿಂದ ಬಲಿಯಾದ ರೋಗಿಗಳ ಸಂಖ್ಯೆ ಎಷ್ಟು ;

(ಆ) ಜ್ವರದಿಂದ ಬಳಲುತ್ತಿರುವ ರೋಗಿಗಳ ರಕ್ತ ಪರೀಕ್ಷೆಗೆ ಲ್ಯಾಬ್‌ಗಳು ಇಲ್ಲದೇ ಗ್ರಾಮಾಂತರ ಪ್ರದೇಶದಲ್ಲಿ ರೋಗಿಗಳು ಸಾವನ್ನೊಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೈಗೊಂಡ ಕ್ರಮಗಳೇನು ;

(ಇ) ಸುಳ್ಯ ತಾಲ್ಲೂಕಿನಲ್ಲಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಿನ ಒಂದಕ್ಕೆ ೩೦೦ಕ್ಕೂ ಅಧಿಕ ರೋಗಿಗಳು ಡೆಂಗ್ಯೂ ಜ್ವರದ ಹಾವಳಿಯ ಬಗ್ಗೆ ತಪಾಸಣೆಗಾಗಿ ಬರುತ್ತಿದ್ದು ಸದರಿ ಆರೋಗ್ಯ ಕೇಂದ್ರದಲ್ಲಿ ಮೂಲಭೂತ ವ್ಯವಸ್ಥೆಗಳಿಲ್ಲದೆ ತೊಂದರೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ವೈದ್ಯರುಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖೆ ಕೈಗೊಂಡ ಕ್ರಮಗಳೇನು ;

(ಉ) ಮಲೇರಿಯಾ ರೋಗ ವ್ಯಾಪಕವಾಗಿ ಹರಡುತ್ತಿದ್ದು, ಇದನ್ನು ನಿಯಂತ್ರಿಸಲು ಇಲಾಖೆ ಕೈಗೊಂಡ ಕ್ರಮಗಳೇನು ; ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಲೇರಿಯಾ ರೋಗದಿಂದ ಬಲಿಯಾದವರ ಸಂಖ್ಯೆ ಎಷ್ಟು ?

## ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಾಫ್ಟ್‌ವೇರ್ ಉದ್ದಿಮೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೫೬೨ (೭೪೩) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಹೊರ ಪ್ರದೇಶದಲ್ಲಿ ಸ್ವಾಫ್ಟ್‌ವೇರ್ ಅಭಿವೃದ್ಧಿ ವಿಸ್ತರಣೆಗೆ ಇಲಾಖೆ ಕೈಗೊಂಡ ಕ್ರಮಗಳೇನು;

(ಆ) ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಾಫ್ಟ್‌ವೇರ್ ಉದಿಮೇಗಳೆಷ್ಟು;

(ಇ) ಮಂಗಳೂರಿನಲ್ಲಿ ಸ್ವಾಫ್ಟ್‌ವೇರ್ ಕಂಪನಿಯನ್ನು ಪ್ರಾರಂಭಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಸದರಿ, ಕಂಪನಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ರಾಜ್ಯದ ಸ್ವಾಫ್ಟ್‌ವೇರ್ ಉದ್ದಿಮೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು;

(ಉ) ಬೆಂಗಳೂರಿನಿಂದ ಹೊರಗಡೆ ಉದ್ಯೋಗ ಪಡೆದಿರುವ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಸರ್ಕಾರಿ ವಾಹನಗಳ ಮೇಲೆ ಕೆಂಪು ದೀಪ ಬಳಕೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೫೬೩ (೭೪೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ವಾಹನಗಳ ಮೇಲೆ ಕೆಂಪು ದೀಪವನ್ನು ಅಳವಡಿಸಲು ಯಾವ ಯಾವ ಹುದ್ದೆಗಳಿಗೆ ಅರ್ಹತೆ ಇದೆ; (ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿ ಶಿಷ್ಟಾಚಾರದ ನಿಯಮಗಳನ್ನು ಮೀರಿ ಕೆಂಪು ದೀಪ ಅಳವಡಿಸಿಕೊಂಡವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ನೀಲಿ, ಹಳದಿ, ಹಸಿರು ಲೈಟ್‌ಗಳನ್ನು ಪೋಲಿಸರು, ಜಿಲ್ಲಾಧಿಕಾರಿಗಳು ಮತ್ತು ಇತರ ಅಧಿಕಾರಿಗಳು ತಮ್ಮ ವಾಹನದ ಮೇಲೆ ಬಳಸುತ್ತಿರುವುದು ಸರಿಯೇ; (ವಿವರ ನೀಡುವುದು)

(ಈ) ಪೋಲೀಸ್ ಅಧಿಕಾರಿಗಳು ನೀಲಿ ಮತ್ತು ಹಳದಿ ಲೈಟ್‌ಗಳನ್ನು ಅಳವಡಿಸಿ ಕೊಳ್ಳಲು ಇರುವ ಔಚಿತ್ಯವೇನು; ಈ ದೀಪಗಳನ್ನು ತೆಗೆದು ಹಾಕಲು ಸರ್ಕಾರ ಕ್ರಮಕೈಗೊಳ್ಳದಿರಲು ಕಾರಣಗಳೇನು?

## ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ತಜ್ಞರು ಮತ್ತು ಕ್ಯಾನ್ಸರ್ ಶಸ್ತ್ರ ಚಿಕಿತ್ಸಕರ ಕೊರತೆ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೫೬೪ (೭೪೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ತಜ್ಞರು ಮತ್ತು ಕ್ಯಾನ್ಸರ್ ಶಸ್ತ್ರ ಚಿಕಿತ್ಸಕರು ಸೇವೆ ಸಲ್ಲಿಸುತ್ತಿದ್ದಾರೆ;

(ಆ) ಸರ್ಕಾರದ ಜಿಲ್ಲಾ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ತಜ್ಞರು ಮತ್ತು ಕ್ಯಾನ್ಸರ್ ಚಿಕಿತ್ಸಕರು ಇಲ್ಲದೇ ರೋಗಿಗಳು ಸಾವನ್ನು ಅಪ್ಪುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಗ್ರಾಮೀಣ ಪ್ರದೇಶದಲ್ಲಿ ಕ್ಯಾನ್ಸರ್ ರೋಗದಿಂದ ಬಳಲುತ್ತಿರುವ ರೋಗಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಬಗ್ಗೆ ಕೈಗೊಂಡ ಕ್ರಮಗಳೇನು;

ಈ) ಕ್ಯಾನ್ಸರ್ ತಜ್ಞರು ಮತ್ತು ಕ್ಯಾನ್ಸರ್ ಶಸ್ತ್ರ ಚಿಕಿತ್ಸಕರನ್ನು ರಾಜ್ಯದ ಪ್ರತಿ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ನೇಮಕ ಮಾಡಲು ಇರುವ ಅಡ್ಡಿಆತಂಕಗಳೇನು; ಈ ರೋಗದಿಂದ ಬಳಲುತ್ತಿರುವವರ ಸಂಖ್ಯೆ ಎಷ್ಟು?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ಸಮುದಾಯದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೫೬೫ (೭೪೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪-೧೫ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿ/ಪಂಗಡದ ಸಮುದಾಯಕ್ಕೆ ವಿವಿಧ ಯೋಜನೆಗಳಿಗಾಗಿ ಬಿಡುಗಡೆಗೊಳಿಸಿದ ಅನುದಾನ ಎಷ್ಟು; (ಯೋಜನಾವಾರು ಬಿಡುಗಡೆಗೊಳಿಸಿದ ಅನುದಾನ ವಿವರ ನೀಡುವುದು)

(ಆ) ಮಂಗಳೂರಿನಲ್ಲಿ ಡಾ: ಅಂಬೇಡ್ಕರ್ ಭವನವು ನಿರ್ಮಾಣ ಕೈಗೊಳ್ಳದೇ ಇರಲು ಕಾರಣಗಳೇನು;

(ಇ) ಡಾ: ಅಂಬೇಡ್ಕರ್ ಭವನಕ್ಕೆ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ; ಈ ಭವನಕ್ಕಾಗಿ ವಶಪಡಿಸಿಕೊಂಡಿರುವ ಸ್ಥಳದ ವಿಸ್ತೀರ್ಣ ಎಷ್ಟು;

(ಈ) ಡಾ: ಅಂಬೇಡ್ಕರ್ ಭವನದ ಕಾಮಗಾರಿ ಪ್ರಾರಂಭಗೊಳ್ಳುವುದು ಯಾವಾಗ? (ವಿವರ ನೀಡುವುದು)

## ತುರುವೇಕೆರೆ ತಾಲ್ಲೂಕಿನ ಸಮುದಾಯ ಭವನಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೫೬೬ (೭೪೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನಿಂದ ಹಿಂದುಳಿದ ವರ್ಗಗಳ ಇಲಾಖೆಗೆ ಸಾರ್ವಜನಿಕ ಹಾಗೂ ಜನಾಂಗದ ಸಮುದಾಯ ಭವನ ನಿರ್ಮಾಣಕ್ಕೆ ಬಂದಿರುವ ಬೇಡಿಕೆಗಳು ಎಷ್ಟು; ಯಾವುವು;

(ಆ) ಯಾರ್‍ಯಾರು ಅರ್ಜಿ ದಾಖಲೆಗಳನ್ನು ಸಲ್ಲಿಸಿರುತ್ತಾರೆ;

(ಇ) ಸಮರ್ಪಕ ದಾಖಲೆಗಳನ್ನು ನೀಡಿದ್ದರೂ ಇದುವರೆವಿಗೂ ಹಣ ಬಿಡುಗಡೆ ಆಗದಿರಲು ಕಾರಣವೇನು;

(ಈ) ಸ್ವೀಕೃತವಾಗಿರುವ ಅರ್ಜಿಗಳು ಯಾವ ಹಂತದಲ್ಲಿವೆ; (ಪೂರ್ಣ ಮಾಹಿತಿ ನೀಡುವುದು)

(ಉ) ಪ್ರಗತಿಯ ಹಂತದಲ್ಲಿರುವ ಸಮುದಾಯ ಭವನಗಳು ಯಾವುವು; ಹಣ ಬಿಡುಗಡೆಗೆ ಇರುವ ತೊಂದರೆ ಏನು? (ವಿವರ ನೀಡುವುದು)

## ಸೀಗೆಹಳ್ಳಿ ಹಾಸ್ಟೆಲ್ ನಲ್ಲಿ ಕುಡಿಯುವ ನೀರಿನ ಸಮಸ್ಯೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)** –

೫೬೭ (೭೪೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುರುವೇಕೆರೆ ತಾಲ್ಲೂಕು, ಮಾಯಸಂದ್ರ ಹೋಬಳಿ ಸೀಗೆಹಳ್ಳಿಯಲ್ಲಿ ಹಿಂದುಳಿದ ವರ್ಗಗಳ (ಬಿ.ಸಿ.ಎಂ) ಹಾಸ್ಟೆಲ್‌ಗಳು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದೆ;

(ಆ) ಹಾಸ್ಟೆಲ್‌ನಲ್ಲಿರುವ ಮಕ್ಕಳಿಗೆ ಸಿಗುತ್ತಿರುವ ಸೌಲಭ್ಯಗಳೇನು;

(ಇ) ಕಳೆದ ಒಂದು ವರ್ಷದಿಂದ ಹಾಸ್ಟೆಲ್‌ನಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಒಂದು ವರ್ಷದಿಂದ ಕುಡಿಯುವ ನೀರಿನ ಸಮಸ್ಯೆ ಇದ್ದರೂ ಗಮನ ಹರಿಸದಿರಲು ಕಾರಣವೇನು;

(ಉ) ತಕ್ಷಣದಿಂದ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದೆ?

## ಬೆಳಗಾವಿ ವಿಭಾಗದ ಜಿಲ್ಲೆಗಳ ಆಹಾರ ವಿತರಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)** –

೫೬೮ (೭೪೯) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ವಿಭಾಗದಲ್ಲಿ ಬರುವ ನ್ಯಾಯಬೆಲೆ ಅಂಗಡಿಗಳು ಎಷ್ಟು ಅವು ಯಾವುವು ;

(ಆ) ಇತ್ತೀಚೆಗೆ ಬಿಪಿಎಲ್ ಕಾರ್ಡ್‌ನ್ನು ಯಾವ ರೀತಿ ಹಂಚಿಕೆ ಮಾಡಲಾಗುತ್ತಿದೆ ;

(ಇ) ಪ್ರತಿ ತಿಂಗಳೂ ೩೦ ಕೆ.ಜಿ. ಕೊಡುತ್ತಿರುವ ಧಾನ್ಯ ಕಡಿಮೆ ಮಾಡಿರುವುದು, ಬಿಪಿಎಲ್ ಕಾರ್ಡ್‌ದಾರರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ನೇಕಾರ ಸಮುದಾಯಗಳನ್ನು (Most Backward Caste)ಗೆ ಸೇರಿಸುವ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)** –

೫೬೯ (೭೪೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೇಕಾರ ಸಮುದಾಯದ ಎಲ್ಲಾ ಪಂಗಡಗಳೂ ಸೇರಿ ಸುಮಾರು ೬೦ ಲಕ್ಷ ಜನಸಂಖ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನೇಕಾರಿಕೆ ಮಾಡುತ್ತಿರುವ ಕುಟುಂಬಗಳನ್ನು ಬೇರೆ ಬೇರೆ ರಾಜ್ಯದಲ್ಲಿ ಅತಿ ಹಿಂದುಳಿದ ಜಾತಿ ಎಂದು ಪರಿಗಣಿಸಿ ಆದೇಶ ಹೊರಡಿಸಿ ನೇಕಾರರಿಗೆ ಹೆಚ್ಚಿನ ಅನುಕೂಲ ಮಾಡಿಕೊಡುತ್ತಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ರಾಜ್ಯದಲ್ಲಿ ಸಮಾನತೆ ದೃಷ್ಟಿಯಿಂದ ಬೇರೆ ರಾಜ್ಯದಲ್ಲಿ ಆದೇಶ ಮಾಡಿರುವ ರೀತಿ (Most Backward Caste) ಎಂದು ಆದೇಶ ಮಾಡಿ ನೇಕಾರರಿಗೆ ಹೆಚ್ಚಿನ ಅನುಕೂಲ ಮಾಡಲಾಗುವುದೆ?

## ಬೆಳಗಾವಿ ವಿಭಾಗದಲ್ಲಿರುವ ಆಸ್ಪತ್ರೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೫೭೦ (೭೪೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ವಿಭಾಗದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಆಸ್ಪತ್ರೆಗಳ ಸೌಕರ್ಯ ಇದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಹಾಲಿ ಇರುವ ಆಸ್ಪತ್ರೆಗಳು ಸಾಕಾಗದೆ ಇನ್ನೂ ಹೆಚ್ಚಿನ ಆಸ್ಪತ್ರೆಗಳ ಬೇಡಿಕೆ ಎಲ್ಲೆಲ್ಲಿ ಬಂದಿರುತ್ತದೆ ;

(ಇ) ಕಳೆದ ಎರಡ ವರ್ಷದಿಂದ ಈ ವಿಭಾಗದಲ್ಲಿ ಎಷ್ಟು ಕಡೆ ಆಸ್ಪತ್ರೆಗಳನ್ನು ಮಂಜೂರು ಮಾಡಲಾಗಿದೆ ;

(ಈ) ಬೇಡಿಕೆಗೆ ಅನುಗುಣವಾಗಿ ಹೊಸ ಆಸ್ಪತ್ರೆಗಳನ್ನು ಯಾವಾಗ ಮಂಜೂರು ಮಾಡಲಾಗುವುದು ?

## ಚಿತ್ರಕಲಾ ಶಿಕ್ಷಕರ ನೇಮಕಾತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೫೭೧ (೭೫೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಯಾವಾಗ ಅಧಿಸೂಚನೆ ಹೊರಡಿಸಲಾಗಿದೆ ; ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಆ) ಚಿತ್ರಕಲಾ ಶಿಕ್ಷಕರ ನೇಮಕಾತಿಗೆ ಇರುವ ಗೊಂದಲಗಳೇನು ; ಅದರ ಪರಿಹಾರಕ್ಕೆ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಪಡಿತರ ವ್ಯವಸ್ಥೆಯ ಮೂಲಕ ಹಂಚಿಕೆ ಮಾಡಲಾಗುತ್ತಿರುವ ಆಹಾರ ಧಾನ್ಯಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೫೭೨ (೭೫೩) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಡಿತರ ವ್ಯವಸ್ಥೆಯ ಮೂಲಕ ಹಂಚಿಕೆ ಮಾಡಲಾಗುತ್ತಿರುವ ಆಹಾರ ಧಾನ್ಯ ಪದಾರ್ಥಗಳು ಯಾವುವು ; ಪ್ರತಿ ಮಾಸಿಕ ಪ್ರಮಾಣವೆಷ್ಟು ;

(ಆ) ಇದರಲ್ಲಿ ಕೇಂದ್ರ ಸರ್ಕಾರದ ಪಾಲೆಷ್ಟು ; (ಸಹಾಯಧನ ಹಾಗೂ ಪ್ರಮಾಣದ ವಿವರ ನೀಡುವುದು)

(ಇ) ಕಳೆದ ಹಣಕಾಸು ವರ್ಷದಲ್ಲಿ ಪಡಿತರ ಹಂಚಿಕೆಯ ಆಹಾರ ಪದಾರ್ಥಕ್ಕಾಗಿ ಸರ್ಕಾರ ಒದಗಿಸಿದ ಹಣ ಎಷ್ಟು ; ಆ ಪೈಕಿ ಖರ್ಚು ಮಾಡಿದ ಹಣ ಎಷ್ಟು ; ಇದರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು ? (ವಿವರ ನೀಡುವುದು)

## ಹೊರ ಸಂಪನ್ಮೂಲದಿಂದ ಕರ್ತವ್ಯ ನಿರ್ವಹಿಸುತ್ತಿರುವ 'ಸಿ' ಮತ್ತು 'ಡಿ' ದರ್ಜೆಯ ನೌಕರರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೫೭೩ (೭೫೨) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಯಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕೇಂದ್ರ ಕಛೇರಿಯಲ್ಲಿ ಹತ್ತಾರು

ವರ್ಷಗಳಿಂದ ನಿರಂತರವಾಗಿ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳಲ್ಲಿ ಹೊರಗಿನವರಿಂದ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು;

(ಆ) ಸದರಿ ಸಿಬ್ಬಂದಿಗಳು ಯಾವ ವರ್ಷದಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಅವರುಗಳ ಹೆಸರು ಸಹಿತ ಮಾಹಿತಿ ನೀಡುವುದು)

(ಇ) ಈ ಸಿಬ್ಬಂದಿಗಳನ್ನು ಖಾಯಂಗೊಳಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆಯೇ ; ಹಾಗಿದ್ದಲ್ಲಿ, ಸದರಿ ಮನವಿಯ ಮೇಲೆ ತೆಗೆದುಕೊಂಡ ಕ್ರಮವೇನು ;

(ಈ) ಇವರುಗಳ ನಿರಂತರ ಸೇವೆ ಪರಿಗಣಿಸಿ ಮಾನವೀಯ ದೃಷ್ಟಿಯಿಂದ ಖಾಯಂಗೊಳಿಸಲಾಗುವುದೆ ?

## ಕ್ರೈಸ್ ಅನ್ನು ಪ್ರತ್ಯೇಕ ನಿರ್ದೇಶನಾಲಯ ಮಾಡುವ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೫೭೪ (೭೫೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರೈಸ್ (ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯನ್ನು) ಪ್ರತ್ಯೇಕ ನಿರ್ದೇಶನಾಲಯ ಮಾಡುವ ಚಿಂತನೆ ಸರ್ಕಾರದ ಮುಂದೆ ಇದೆಯೇ;

(ಆ) ಇದ್ದಲ್ಲಿ, ಯಾವಾಗ ಮಾಡಲಾಗುವುದು;

(ಇ) ಇದರಿಂದ ಶಿಕ್ಷಕ / ಸಿಬ್ಬಂದಿಗಳ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಸಿಗುವುದೆಂಬುದನ್ನು ಸರ್ಕಾರ ಚಿಂತಿಸಿದೆಯೇ?

## ೧೦೮ ಆರೋಗ್ಯ ಕವಚ ವಾಹನಗಳು ದುರಸ್ಥಿಯಿಂದಾಗಿ ಸಾರ್ವಜನಿಕರಿಗೆ ತೊಂದರೆ ಆಗಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭೫ (೭೫೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿಯ ೧೦೮ ಆರೋಗ್ಯ ಕವಚ ವಾಹನಗಳು ದುರಸ್ಥಿಗೆ ಒಳಗಾಗಿ ಕೆಟ್ಟು ನಿಲ್ಲುತ್ತಿದ್ದು ಸಾರ್ವಜನಿಕರು ೧೦೮ ವಾಹನಗಳ ಸೌಲಭ್ಯದಿಂದ ವಂಚಿತರಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ೧೦೮ ವಾಹನಗಳು ಎಷ್ಟು; (ಆಸ್ಪತ್ರೆವಾರು ಮಾಹಿತಿ ಒದಗಿಸುವುದು)

(ಇ) ೧೦೮ ವಾಹನಗಳಲ್ಲಿ ಸಿಬ್ಬಂದಿ ಸಲಕರಣೆಗಳು ಔಷದೋಪಕರಣಗಳ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ೧೦೮ ವಾಹನಗಳ ಉಸ್ತುವಾರಿಯನ್ನು ಸರಿಯಾಗಿ ನಿರ್ವಹಿಸದೆ ಇರುವುದರಿಂದ ಅವು ಕೆಟ್ಟು ನಿಲ್ಲುತ್ತಿದ್ದು ಸರ್ಕಾರವು ಕೈಗೊಂಡ ಕ್ರಮಗಳೇನು;

(ಉ) ಜಿಲ್ಲೆಯ ೧೦೮ ವಾಹನಗಳ ಉಸ್ತುವಾರಿಗೆ ಹಾಗೂ ಸಿಬ್ಬಂದಿಗೆ ಸರ್ಕಾರ ೨೦೧೨-೧೩, ೨೦೧೩-೧೪, ೨೦೧೪-೧೫ ರಲ್ಲಿ ಖರ್ಚು ಮಾಡಿದ ಅನುದಾನವೆಷ್ಟು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭೬ (೭೫೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಜಿಲ್ಲೆಯಲ್ಲಿ ಒಟ್ಟು ಎಷ್ಟು ಜನರಲ್ ಆಸ್ಪತ್ರೆಗಳು, ಸಮುದಾಯ ಆಸ್ಪತ್ರೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ;

(ಇ) ಜನರಲ್ ಆಸ್ಪತ್ರೆಗಳಲ್ಲಿ, ಸಮುದಾಯ, ಆಸ್ಪತ್ರೆಗಳಲ್ಲಿ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸರ್ಕಾರದ ನಿಯಮಾನುಸಾರ ಇರಬೇಕಾದ ಸಿಬ್ಬಂದಿ ಎಷ್ಟು; ಈಗ ಸದ್ಯ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು; (ತಾಲ್ಲೂಕುವಾರು, ಹುದ್ದೆವಾರು ಮಾಹಿತಿ ನೀಡುವುದು)

(ಈ) ಖಾಲಿ ಇರುವ ಹುದ್ದೆಗಳನ್ನು ಸರ್ಕಾರವು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡುವುದು ?

## ೨೦೧೩-೧೪, ೨೦೧೪-೨೦೧೫ನೇ ಸಾಲಿನ ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ಅನುದಾನದ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭೭ (೭೬೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪, ೨೦೧೪-೨೦೧೫ ಸಾಲಿನಲ್ಲಿ ಇಲ್ಲಿಯವರೆಗೆ ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ ಹಣವೆಷ್ಟು ;

(ಆ) ಈ ಸಾಲಿನಲ್ಲಿ ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯ ಎಲ್ಲಾ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಸರ್ಕಾರಿ ವಸತಿ ನಿಲಯ ಹಾಗೂ ಖಾಸಗಿ ವಸತಿ ನಿಲಯಗಳಲ್ಲಿ ವಾಸ ಮಾಡತಕ್ಕಂತಹ ಮಕ್ಕಳಿಗೆ ಊಟದ ವೆಚ್ಚಕ್ಕಾಗಿ ಖರ್ಚು ಮಾಡಿದ ಹಣ ಎಷ್ಟು;

(ಇ) ಈ ಸಾಲಿನಲ್ಲಿ ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇರತಕ್ಕಂತಹ ಎಲ್ಲಾ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ವಾಸ ಮಾಡತಕ್ಕಂತಹ ಮಕ್ಕಳಿಗೆ ಸಮವಸ್ತ್ರ ಹಾಸಿಗೆ ಹೊದಿಕೆಗಾಗಿ ಖರೀದಿಗಾಗಿ ಖರ್ಚು ಮಾಡಿದ ಹಣವೆಷ್ಟು ?

## ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆ ಬಸ್ಸು ನಿಲ್ದಾಣದ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭೮ (೭೬೧) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಬಸ್ಸು ನಿಲ್ದಾಣ ಇಲ್ಲದೆ ಜನರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಜಿಲ್ಲೆಯಲ್ಲಿ ಸಾರಿಗೆ ಇಲಾಖೆಯಿಂದ ಹೊಸ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆಯೇ;

(ಇ) ಕಳೆದ ೩ ವರ್ಷಗಳಲ್ಲಿ ಹೊಸ ಬಸ್ ಖರೀದಿಗಾಗಿ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು; ಎಷ್ಟು ಹೊಸ ಬಸ್ಸಗಳನ್ನು ಖರೀದಿ ಮಾಡಲಾಗಿದೆ ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಕಳೆದ ೨ ವರ್ಷಗಳಿಂದ ವರದಿಯಾಗಿರುವ, H1. N1. ಡೆಂಗ್ಯೂ ಪ್ರಕರಣದ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭೯ (೭೬೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ವರದಿಯಾಗಿರುವ ಹೆಚ್೧.ಎನ್೧, ಡೆಂಗ್ಯೂ ಮತ್ತು ಚಿಕ್ಕನ್ ಗುನ್ಯ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಹಾಗೂ ಪರಿಹಾರ ಕ್ರಮಗಳೇನು ;

(ಇ) ಯಾವ ಯಾವ ಪ್ರಕರಣಗಳಲ್ಲಿ ಸಾವು ಸಂಭವಿಸಿದೆ ; (ವಿವರ ಒದಗಿಸುವುದು)

(ಈ) ಸಾವಾದ ಪ್ರಕರಣಗಳಲ್ಲಿ ಮೃತರ ಅವಲಂಬಿತರಿಗೆ ಪರಿಹಾರ ನೀಡಲಾಗಿದೆಯೇ ? (ವಿವರ ನೀಡುವುದು)

## ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೮೦ (೬೨೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦–೨೦೧೧, ೨೦೧೧–೨೦೧೨ ಮತ್ತು ೨೦೧೪–೨೦೧೫ನೇ ಸಾಲಿನಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಗುಲ್ಬರ್ಗಾ

ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕೊಳವೆ ಬಾವಿ ಕೊರೆಯಲು ನಿಗದಿಪಡಿಸಿದ ಗುರಿಗಳೆಷ್ಟು; ಸಾಧಿಸಿದ ಗುರಿ ಹಾಗೂ ಬಾಕಿ ಇರುವ ಗುರಿ ಎಷ್ಟು;

(ಆ) ಈಗಾಗಲೇ ಕೊರೆದ ಕೊಳವೆ ಬಾವಿಗಳೆಷ್ಟು; ಅಳವಡಿಸಿದ ಪಂಪ್‌ಸೆಟ್‌ಗಳೆಷ್ಟು; ವಿದ್ಯುಧೀಕರಣಗೊಳಿಸಿದ ಕೊಳವೆ ಬಾವಿಗಳೆಷ್ಟು;

(ಇ) ಬಾಕಿ ಉಳಿದಿರುವ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುದ್ಧೀಕರಣಗೊಳಿಸಿ ಪಂಪ್‌ಸೆಟ್‌ಗಳನ್ನು ಅಳವಡಿಸಬೇಕಿದೆ;

(ಈ) ಕೊರೆಯದೆ ಬಾಕಿ ಉಳಿದಿರುವ ಕೊಳವೆ ಬಾವಿಗಳನ್ನು ಹಿಂಬಾಕಿ ಎಂದು ಪರಿಗಣಿಸಿ ಈ ಸಾಲಿನಲ್ಲಿ ಕೊರೆಸಲು ಇರುವ ತೊಂದರೆಗಳೇನು?

## ಕೊಪ್ಪಳ ಜಿಲ್ಲೆಯಲ್ಲಿ ನವಜಾತ ಶಿಶುಗಳ ಮತ್ತು ತಾಯಂದಿರ ಮರಣದ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೮೧ (೭೬೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ನವಜಾತ ಶಿಶುಗಳ ಮತ್ತು ತಾಯಂದಿರು ಮರಣ ಹೊಂದುತ್ತಿರುವ ಬಗ್ಗೆ ಪತ್ರಿಕೆಗಳಲ್ಲಿ ವರದಿಯಾಗುತ್ತಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯ ಎಲ್ಲಾ ಸರಕಾರ ಆಸ್ಪತ್ರೆಗಳಲ್ಲಿ ೨೦೧೪-೧೫ ರಿಂದ ಪ್ರಸಕ್ತ ಸಾಲಿನವರೆಗೂ ಜನಿಸಿದ ಶಿಶುಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಆರೋಗ್ಯವಂತ ಶಿಶುಗಳ ಸಂಖ್ಯೆ ಹಾಗೂ ಮೃತಪಟ್ಟ ಶಿಶುಗಳ ಸಂಖ್ಯೆ ಎಷ್ಟು ;

(ಇ) ಸದರಿ ಸಾಲಿನಲ್ಲಿ ಮೃತಪಟ್ಟ ತಾಯಂದಿರ ಸಂಖ್ಯೆ ಎಷ್ಟು ;

(ಈ) ಶಿಶುಗಳು ಮತ್ತು ತಾಯಂದಿರ ಮರಣಕ್ಕೆ ಕಾರಣವೇನು ; ಜಿಲ್ಲೆಯಲ್ಲಿ ತಜ್ಞ ವೈದ್ಯರ ಕೊರತೆಯೇನಾದರೂ ಇದೆಯೇ ;

(ಉ) ಇಲ್ಲವಾದಲ್ಲಿ ಗರ್ಭಿಣಿ ತಾಯಂದಿರಿಗೆ ಪೌಷ್ಟಿಕ ಆಹಾರ ಕೊರತೆಯೇನಾದರೂ ಇದೆಯೇ ;

(ಊ) ಈ ಸಾವಿನ ಸಂಖ್ಯೆಯನ್ನು ನಿಯಂತ್ರಿಸುವಲ್ಲಿ ಸರಕಾರ ಕೈಗೊಳ್ಳುತ್ತಿರುವ ಕ್ರಮಗಳೇನು ?

## ಪ್ರತಿ ತಾಲ್ಲೂಕುಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಛೇರಿಗಳ ಸ್ಥಾಪನೆ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೮೨ (೭೬೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಛೇರಿಗಳನ್ನು ಸ್ಥಾಪಿಸಲು ಸರಕಾರ ಕ್ರಮ ಕೈಗೊಂಡಿದೆಯೇ ;

(ಆ) ಎಷ್ಟು ದಿನಗಳಿಂದ ಸದರಿ ಕಛೇರಿಗಳು ಸಾರ್ವಜನಿಕ ಸೇವೆಯಲ್ಲಿ ತೊಡಗಿವೆ ;

(ಇ) ಈ ಕಛೇರಿಗಳಿಗೆ ಸೃಜಿಸಲಾದ ಸಿಬ್ಬಂದಿಗಳ ವಿವರ ನೀಡುವುದು ;

(ಈ) ಪ್ರತಿ ಕಛೇರಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವೃಂದವಾರು ಮಾಹಿತಿಯನ್ನು ನೀಡುವುದು ;

(ಉ) ಎಲ್ಲಾ ಕಾರ್ಯಾಲಯಗಳಲ್ಲಿ ಹುದ್ದೆಗಳು ಖಾಲಿ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಹುದ್ದೆಗಳ ಭರ್ತಿಗಾಗಿ ಸರಕಾರ ಕೈಗೊಂಡ ಕ್ರಮಗಳೇನು ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಮಂಜೂರಾಗಿರುವ ಕರ್ತವ್ಯ ನಿರ್ವಹಿಸುತ್ತಿರುವ ಸಂಖ್ಯೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೮೩ (೭೬೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಮಂಜೂರಾಗಿರುವ ಹಾಗೂ ಕರ್ತವ್ಯ ನಿರ್ವಹಿಸುತ್ತಿರುವ ಪುರುಷ ಹಾಗೂ ಮಹಿಳಾ ನಿಲಯ ಮೇಲ್ವಿಚಾರಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ಪ್ರಕಾರ ಪದೋನ್ನತಿ ಹುದ್ದೆ ಯಾವುದು ಹಾಗೂ ಆ ಹುದ್ದೆಯ ವೇತನ ಶ್ರೇಣಿ ಏನು ;

(ಇ) ಇಲಾಖೆಯಲ್ಲಿ ೧೯೮೫ ರಿಂದ ೧೯೯೦ರ ಮಧ್ಯೆ ನೇಮಕಾತಿ ಆದ ಪಟ್ಟಿಯಲ್ಲಿ ಸುಮಾರು ೨೫–೩೦ ವರ್ಷಗಳಿಂದ ಪದೋನ್ನತಿ ಪಡೆಯದೇ ಉಳಿದ ನಿಲಯ ಮೇಲ್ವಿಚಾರಕರ ಸಂಖ್ಯೆ ಎಷ್ಟು ; ಅವರುಗಳಿಗೆ ಇದೂವರೆಗೂ ಪದೋನ್ನತಿ ದೊರಕದಿರುವುದಕ್ಕೆ ಕಾರಣವೇನು ;

(ಈ) ಹಾಲಿ ಚಾಲ್ತಿಯಲ್ಲಿರುವ ೨೦೦೭ (ಸಿ ಮತ್ತು ಆರ್) ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ಪ್ರಕಾರ ನಿಲಯಪಾಲಕರ ಹುದ್ದೆಯಿಂದ ವರ್ಗಗಳ ವಿಸ್ತೀರ್ಣಾಧಿಕಾರಿಗಳ ಹುದ್ದೆಗೆ ಪದೋನ್ನತಿ ನೀಡಲಾಗುತ್ತಿತ್ತು ಅದಾಗ್ಯೂ ಸಹ ಈ

ಎರಡೂ ಹುದ್ದೆಗಳು ಏಕರೂಪ ಹುದ್ದೆ ಎಂದು ೨೦೧೦ರಲ್ಲಿ ಆದೇಶ ಹೊರಡಿಸಿ ನಿಲಯ ಮೇಲ್ವಿಚಾರಕರ ಪದೋನ್ನತಿ ಹುದ್ದೆಯಿಂದ ನಿಲಯಪಾಲಕರ ಹುದ್ದೆ ಮುಂದುವರೆಯಬಾರದೆಂದು ಮಾಡಿದ ಆದೇಶ ಸಮರ್ಪಕವೇ ?

## ದತ್ತಪೀಠ ಹಾಗೂ ಸುತ್ತಲಿನ ಗ್ರಾಮಗಳಿಗೆ ಬಸ್ ಸೌಕರ್ಯ ಕಲ್ಪಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೫೮೪ (೭೭೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ದತ್ತ ಪೀಠ ಮಾರ್ಗದಲ್ಲಿ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ಖಾಸಗಿ ಬಸ್ ಸಂಚಾರ ಮಾತ್ರವಿದ್ದು, ಕೆ.ಎಸ್.ಆರ್.ಟಿ.ಸಿ. ಬಸ್ ಸಂಚಾರದ ಅನುಕೂಲ ಇದುವರೆಗೂ ಕಲ್ಪಿಸಿಲ್ಲವೆನ್ನುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಕಾರಣವೇನು ; ಇಲ್ಲವಾದಲ್ಲಿ ದತ್ತ ಪೀಠಕ್ಕೆ ಸಾರ್ವಜನಿಕರ ಪ್ರಯಾಣಕ್ಕೆ ಒದಗಿಸಿರುವ ಅನುಕೂಲಗಳೇನು ;

(ಇ) ಈ ಸಂಬಂಧ ಬಸ್ ಸಂಚಾರ ವ್ಯವಸ್ಥೆ ಇನ್ನಷ್ಟು ಹೆಚ್ಚು ಕಲ್ಪಿಸಲು ಸಾರ್ವಜನಿಕರಿಂದ ಬೇಡಿಕೆ ಬಂದಿದೆಯೇ ; ಬಂದಿದ್ದಲ್ಲಿ, ಹೆಚ್ಚುವರಿ ಅನುಕೂಲ ಕಲ್ಪಿಸಲು ಸರ್ಕಾರವು ಮುಂದಾಗುವುದೇ ?

## ಡೆಂಗ್ಯೂ, ಚಿಕನ್ ಗುನ್ಯಾ ಖಾಯಿಲೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೫೮೫ (೭೭೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡೆಂಗ್ಯೂ, ಚಿಕನ್ ಗುನ್ಯಾ ಖಾಯಿಲೆಗಳನ್ನು ತಡೆಗಟ್ಟಲು ಹಾಗೂ ಖಾಯಿಲೆಗಳನ್ನು ಗುಣಪಡಿಸಲು ತಮಿಳುನಾಡಿನಲ್ಲಿ ಹಾಗೂ ಇತರೆ ರಾಜ್ಯಗಳಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂಬ ಮಾಹಿತಿ ಸಂಗ್ರಹಿಸಲಾಗಿದೆಯೇ ; ಸಂಗ್ರಹಿಸಲಾಗಿದ್ದಲ್ಲಿ ವಿವರಣೆ ನೀಡುವುದು ;

(ಆ) ತಮಿಳುನಾಡಿನ ಸರ್ಕಾರವು ಸಾರ್ವಜನಿಕರಿಗೆ ಉಚಿತವಾಗಿ ಔಷಧಯುಕ್ತವಾದ ವಿಶೇಷ ಬೇರಿನ ಮೂಲಿಕೆಯನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಕುರಿತು ಸರ್ಕಾರವು ಡೆಂಗ್ಯೂ, ಚಿಕನ್ ಗುನ್ಯಾ ಖಾಯಿಲೆಗಳಿಂದ ವಿಶೇಷ ಔಷಧಿ ಅಥವಾ ಮೂಲಿಕೆಯನ್ನು ಆಯುಷ್ ಇಲಾಖೆಯಿಂದ ಪಡೆದು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವಿತರಿಸಲು ಮುಂದಾಗುವುದೇ ?

## B.M.T.C.ಯಲ್ಲಿ ಬಸ್ಸ್‌ನ್ನು ಹೊರಗುತ್ತಿಗೆ ಪಡೆಯುವ ಚಿಂತನೆ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೫೮೬ (೭೭೫) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಎಂ.ಟಿ.ಸಿ. ನಷ್ಟದಲ್ಲಿರುವುದು ನಿಜವೇ ; ನಿಜವಾದಲ್ಲಿ ಯಾವ ಅವಧಿಯಿಂದ ನಷ್ಟದಲ್ಲಿದೆ ; (ವರ್ಷವಾರು ನಷ್ಟದ ವಿವರ ನೀಡುವುದು)

(ಆ) ಈ ರೀತಿ ನಷ್ಟ ಉಂಟಾಗಲು ಪ್ರಮುಖ ಕಾರಣವೇನು ;

(ಇ) ಇದಕ್ಕೆ ಪರಿಹಾರವಾಗಿ ಹೊರಗುತ್ತಿಗೆ ಬಸ್ ಪಡೆಯಲು ಚಿಂತನೆ ನಡೆಸಿರುವುದು ನಿಜವೇ ;

(ಈ) ಈ ರೀತಿಯ ಚಿಂತನೆಗೆ ಕಾರಣವೇನು ; ಇದರಿಂದ ನಷ್ಟವನ್ನು ಹೇಗೆ ಪರಿಹರಿಸಬಹುದು ವಿವರ ನೀಡಿ ?

## ಆಹಾರ ಸುರಕ್ಷತೆ ಮತ್ತು ಗುಣಮಟ್ಟ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೫೮೭ (೭೭೨) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ನಿರ್ದೇಶನದನ್ವಯ ಮಾಡಿರುವ ರಾಜ್ಯ ಆಹಾರ ಪ್ರಾಧಿಕಾರದಲ್ಲಿ ಸಿಬ್ಬಂದಿ ಕೊರತೆ ಇರುವುದು ನಿಜವೇ ; ಕೊರತೆ ಇದ್ದಲ್ಲಿ ವಿವರ ನೀಡುವುದು ;

(ಆ) ಸದರಿ ಪ್ರಾಧಿಕಾರದ ಕರ್ತವ್ಯಗಳೇನು ;

(ಇ) ತಾಲ್ಲೂಕಿಗೆ ಒಬ್ಬ ಅಧಿಕಾರಿ ಇರಬೇಕೆನ್ನುವುದು ನಿಜವೇ ; ಯಾವ ಯಾವ ತಾಲ್ಲೂಕಿನಲ್ಲಿ ಈ ಹುದ್ದೆ ಖಾಲಿ ಇರುತ್ತದೆ ;

(ಈ) ಈ ಸಂಬಂಧ ಪ್ರಾಧಿಕಾರವನ್ನು ಬಲಪಡಿಸಲು ಕ್ರಮ ಕೈಗೊಳ್ಳಲಾಗುವುದೆ ?

## ಸರ್ಕಾರಿ ಗೋದಾಮಿನಲ್ಲಿ ಅಕ್ಕಿ ಗೋಧಿ ಪಡಿತರ ನಾಪತ್ತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೫೮೮ (೭೭೬) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರದ ಸರ್ಕಾರಿ ಗೋದಾಮಿನಲ್ಲಿ ಅಕ್ಕಿ, ಗೋಧಿ ಪಡಿತರ ನಾಪತ್ತೆಯಾಗಿರುವುದು ನಿಜವೇ ; ನಿಜವಾಗಿದ್ದಲ್ಲಿ ನಾಪತ್ತೆಯಾದ ಪಡಿತರ ಪ್ರಮಾಣದ ವಿವರ ನೀಡುವುದು ;

(ಆ) ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ಸದರಿ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದ್ದು ಹೇಗೆ ಮತ್ತು ಯಾವಾಗ ;

(ಈ) ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳಾವುವು ; (ವಿವರ ನೀಡುವುದು)

(ಉ) ಸರ್ಕಾರದ ಗಮನಕ್ಕೆ ಬಂದರೂ ಕ್ರಮ ತೆಗೆದುಕೊಳ್ಳುವಲ್ಲಿ ವಿಳಂಬ ಮಾಡಲು ಕಾರಣವೇನು ?

## ಆರೋಗ್ಯ ಕವಚ ೧೦೮ ಯೋಜನೆಯಡಿ ರೆಸ್ಪಾಂಡರ್ ಬೈಕ್‌ಗಳ ಬಿಡುಗಡೆ ಕುರಿತು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೫೮೯ (೭೭೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಕವಚ ೧೦೮ ಯೋಜನೆಯಡಿ ಅಪಘಾತ ಸಮಯದಲ್ಲಿ ಪ್ರಥಮ ಚಿಕಿತ್ಸೆ ನೀಡಲು ರೆಸ್ಪಾಂಡರ್ ಬೈಕ್‌ಗಳನ್ನು ಬಿಡುಗಡೆಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಲ್ಲಾ ಜಿಲ್ಲೆಗಳ ವ್ಯಾಪ್ತಿಯಲ್ಲಿ ಈ ಯೋಜನೆ ಜಾರಿಗೆ ತರಲಾಗಿದೆಯೇ ; ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆ ಜಾರಿಗೆ ಬಂದಿದೆ ; (ಮಾಹಿತಿ ನೀಡುವುದು)

(ಇ) ಈ ಯೋಜನೆಗಾಗಿ ಸರಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಇಲ್ಲಿಯವರೆಗೆ ಬಿಡುಗಡೆಗೊಳಿಸಲಾದ ಒಟ್ಟು ಬೈಕ್‌ಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

**ಆಹಾರ ಸುರಕ್ಷತಾ ಅಧಿಕಾರಿಗಳ ಹುದ್ದೆ ಭರ್ತಿ ಮಾಡುವ ಕುರಿತು**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೫೯೦ (೭೭೮) ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಲ್ಲಿ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಆಹಾರ ಸುರಕ್ಷತಾ ಅಧಿಕಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆಹಾರ ಸುರಕ್ಷತಾ ಅಧಿಕಾರಿಗಳ ಹುದ್ದೆಗಳನ್ನು ಯಾವ ನಿಯಮದಡಿಯಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಇ) ಖಾಲಿ ಇರುವ ಆಹಾರ ಸುರಕ್ಷತಾ ಅಧಿಕಾರಿಗಳ ಭರ್ತಿಗಾಗಿ ಸರಕಾರ ಕೈಗೊಂಡಿರುವ ಕ್ರಮವೇನು ; (ಮಾಹಿತಿ ನೀಡುವುದು)

(ಈ) ಆಹಾರ ಸುರಕ್ಷತಾ ಅಧಿಕಾರಿಗಳ ಹುದ್ದೆಗಳ ಭರ್ತಿಗಾಗಿ ಇರುವ ಅರ್ಹತೆಗಳೇನು ? (ಮಾಹಿತಿ ನೀಡುವುದು)

## ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಅವ್ಯವಹಾರ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೫೯೧ (೭೭೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ವಾಹನಗಳ ಬಿಡಿ ಭಾಗಗಳ ಖರೀದಿ ಸಂಬಂಧಿಸಿದಂತೆ ಭಾರಿ ಅವ್ಯವಹಾರ ನಡೆದಿರುವ ಪ್ರಕರಣವು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಎಷ್ಟು ಮೊತ್ತದ ಅವ್ಯವಹಾರ ನಡೆದಿದೆ ಹಾಗೂ ಖರೀದಿಸಿದ ಸಾಮಗ್ರಿಗಳು ಯಾವುವು ; (ಮಾಹಿತಿ ನೀಡುವುದು)

(ಇ) ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ೨೦೧೫–೧೬ನೇ ಸಾಲಿನಲ್ಲಿ ವಾಹನಗಳ ಬಿಡಿ ಭಾಗಗಳಿಗೆ ಖರ್ಚು ಮಾಡಿದ ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಈ) ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಅವ್ಯವಹಾರವನ್ನು ಪತ್ತೆ ಹಚ್ಚಲು ತನಿಖಾ ತಂಡವನ್ನು ನೇಮಿಸಲಾಗಿದೆಯೇ ; ಹಾಗಿದ್ದರೆ, ಈ ಪ್ರಕರಣದ ತನಿಖೆಗೆ ಆದೇಶಿಸಲಾಗಿರುವುದು ಯಾವಾಗ ? (ಮಾಹಿತಿ ನೀಡುವುದು)

## ಮದ್ದೂರಿನ ತಾಲ್ಲೂಕಿನಲ್ಲಿ ಬಸ್ಸಿನ ಸೌಲಭ್ಯ ಕಲ್ಪಿಸುವುದು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೫೯೨ (೭೮೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ, ಮದ್ದೂರು ತಾಲ್ಲೂಕಿನಿಂದ ಕೊಪ್ಪ ಮಾರ್ಗವಾಗಿ ಹೆಚ್ಚಿನ ಸರ್ಕಾರಿ ಬಸ್ಸುಗಳ ಸೌಲಭ್ಯಗಳಿಲ್ಲದೆ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ತೊಂದರೆ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಕೊಪ್ಪದಿಂದ–ಹರಳೀಕೆರೆ–ಕೊಡುವತ್ತಿ–ಹೆಚ್.ದುರ್ಗ–ಮಾಗಡಿ ಮಾರ್ಗವಾಗಿ ಬೆಂಗಳೂರಿಗೆ ಪಾಂಡವಪುರ ಘಟಕದಿಂದ ಹೆಚ್ಚುವರಿ ಬಸ್ಸಿನ ಸೌಲಭ್ಯ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಈ) ಹಾಗಿದ್ದಲ್ಲಿ, ಯಾವ ಕಾಲ ಮಿತಿಯಲ್ಲಿ ಸದರಿ ಮಾರ್ಗವಾಗಿ ಬಸ್ಸಿನ ಸಂಚಾರ ಕಲ್ಪಿಸಲು ಕ್ರಮ ವಹಿಸಲಾಗುವುದು?

## ಗ್ರಾಮಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೫೯೩ (೭೮೬) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ಇದುವರೆವಿಗೂ ಎಷ್ಟು ಗ್ರಾಮಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇನ್ನು ಎಷ್ಟು ಗ್ರಾಮಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸಬೇಕಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಗ್ರಾಮಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸಲು ರೂಪಿಸಲಾಗಿರುವ ಯೋಜನೆಗಳೇನು ;

(ಈ) ಯಾವ ಕಾಲ ಮಿತಿಯಲ್ಲಿ ರಸ್ತೆ ಸಂಪರ್ಕ ಕಲ್ಪಿಸಲಾಗುವುದು ?

## ಎಲ್ಲಾ ಬಡ ಕುಟುಂಬದ ಮಕ್ಕಳಿಗೆ ಶಿಕ್ಷಣವನ್ನು ಕಡ್ಡಾಯಗೊಳಿಸುವ ಕುರಿತು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೯೪ (೭೯೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎಲ್ಲ ಬಡ ಕುಟುಂಬಗಳ ಮಕ್ಕಳಿಗೆ ಶಿಕ್ಷಣದ ಹಕ್ಕನ್ನು ಖಾತರಿಗೊಳಿಸಲು ಹಾಗೂ ವಿದ್ಯಾರ್ಥಿ ವೇತನದಲ್ಲಿ ಸಮಾನತೆಯನ್ನು ತರುವ ಕುರಿತು ಸರ್ಕಾರ ಚಿಂತಿಸುತ್ತಿದೆಯೇ;

(ಆ) ಅಲ್ಪ ಸಂಖ್ಯಾತರು, ಹಿಂದುಳಿದವರು ಮತ್ತು ದಲಿತರಲ್ಲದ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಷ್ಟು ಬಡ ಕುಟುಂಬಗಳ ಮಕ್ಕಳು ಶಾಲೆಗಳಲ್ಲಿ ದಾಖಲಾಗಿದ್ದಾರೆ ಮತ್ತು ಇಂತಹ ಮಕ್ಕಳು ಶಿಕ್ಷಣದಲ್ಲಿ ಮುಂದುವರೆಯಲು ಸರ್ಕಾರ ಯಾವ ಯೋಜನೆ ಕಾರ್ಯಕ್ರಮಗಳನ್ನು ರೂಪಿಸಿದೆ ಮತ್ತು ನೀಡಲಾಗುತ್ತಿರುವ ವಿದ್ಯಾರ್ಥಿವೇತನ ಎಷ್ಟು;

(ಇ) ಇಂತಹ ಯಾವುದೇ ಯೋಜನೆ ಇಲ್ಲವಾದಲ್ಲಿ, ಈ ಬಡ ಕುಟುಂಬಗಳ ಮಕ್ಕಳು ಶಿಕ್ಷಣ ಪಡೆಯಲು ವಂಚಿತರಾಗುವ ಸಾಧ್ಯತೆಗಳು ಇರುವುದರಿಂದ ಈ ಕುರಿತು ಯಾವ ಇಲಾಖೆ ಗಮನಹರಿಸುತ್ತಿದೆ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳಲ್ಲಿದಿರುವುದು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೯೫ (೭೯೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರುಗಳು ಇಲ್ಲದಿರುವುದು ಮತ್ತು ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರಿಪಡಿಸಲು ಸರ್ಕಾರದ ಮುಂದಿರುವ ಸವಾಲುಗಳೇನು;

(ಇ) ಮಹಿಳೆಯರು ಮತ್ತು ಮಕ್ಕಳಿಗೆ ಉತ್ತಮ ಆರೋಗ್ಯ ಸೇವೆ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೯೬ (೭೯೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಂಗಾ ಕಲ್ಯಾಣ ಯೋಜನೆಯಡಿ ಪ್ರತಿ ವಿಧಾನಸಭಾ ಕ್ಷೇತ್ರವಾರು ಎಷ್ಟು ಫಲಾನುಭವಿಗಳಿಗೆ ಪ್ರಸ್ತುತ ಸೌಲಭ್ಯವನ್ನು ನೀಡಲಾಗುತ್ತಿದೆ;

(ಆ) ಜನಸಂಖ್ಯೆ ಮತ್ತು ಫಲಾನುಭವಿಗಳ ಸಂಖ್ಯೆಯು ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಜಾಸ್ತಿಯಿದ್ದು, ಕಡಿಮೆ ಸಂಖ್ಯೆಯಲ್ಲಿ ಸೌಲಭ್ಯವನ್ನು ನೀಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; ಈ ಯೋಜನೆಯ ಗುರಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಗಂಗಾ ಕಲ್ಯಾಣ ಯೋಜನೆಗೆ ಆಯ್ಕೆಗೊಂಡ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಯೋಜನೆಯ ಸೌಲಭ್ಯವನ್ನು ಪಡೆಯಲು ಕಾರ್ಯರೂಪಕ್ಕೆ ತರಲಾಗುತ್ತಿದೆ?

7

## ಸರ್ಕಾರಿ ವೈದ್ಯರುಗಳು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೯೭ (೭೯೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಸರ್ಕಾರಿ ಆಸ್ಪತ್ರೆಗಳಿಗೆ ಆಯ್ಕೆ ಆಗಿರುವ ವೈದ್ಯರುಗಳು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಕೆಲಸವನ್ನು ನಿರ್ವಹಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ;

(ಆ) ಕಳೆದ ೦೩ ವರ್ಷಗಳಿಂದ ಸರ್ಕಾರಿ ವೈದ್ಯರುಗಳು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಕೆಲಸವನ್ನು ನಿರ್ವಹಿಸುತ್ತಿರುವ ಬಗ್ಗೆ ಎಷ್ಟು ಪ್ರಕರಣಗಳು ದಾಖಲಾಗಿವೆ;

(ಇ) ವೈದ್ಯಾಧಿಕಾರಿಗಳಿಗೆ ಗ್ರಾಮೀಣ ಪ್ರದೇಶದಲ್ಲಿ ಒಂದು ವರ್ಷ ಕಡ್ಡಾಯಗೊಳಿಸಿರುವ ಆದೇಶವಿದ್ದರೂ ಸಹ, ಈ ಆದೇಶವನ್ನು ಉಲ್ಲಂಘಿಸುತ್ತಿರುವ ವೈದ್ಯರುಗಳ ಸಂಖ್ಯೆ ಎಷ್ಟು;

(ಈ) ಗ್ರಾಮೀಣ ಸೇವೆಯನ್ನು ಸಲ್ಲಿಸದೆ, ಉದಾಸೀನ ತೋರುತ್ತಿರುವ ವೈದ್ಯರ ವಿರುದ್ಧ ಸರ್ಕಾರವು ಹಮ್ಮಿಕೊಂಡಿರುವ ಕಠಿಣ ಕ್ರಮಗಳಾವುವು?

## ಚಿತ್ರದುರ್ಗ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸುವ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೯೮ (೭೯೭) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆಗೆ ಮಂಜೂರಾಗಿದ್ದ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸುವ ವಿಚಾರದಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣವೇನು; (ವಿವರ ನೀಡುವುದು)

(ಆ) ವೈದ್ಯಕೀಯ ಕಾಲೇಜು ಆರಂಭಿಸುವ ವಿಚಾರ ಯಾವ ಹಂತದಲ್ಲಿದೆ; ಯಾವಾಗ ಆರಂಭಿಸಲಾಗುತ್ತದೆ? (ವಿವರ ನೀಡುವುದು)

## ಸಾಲುಮರದ ತಿಮ್ಮಕ್ಕನ ವೈದ್ಯಕೀಯ ವೆಚ್ಚದ ಕುರಿತು

**ಶ್ರೀ ಗೋ.ಮಧುಸೂದನ್ (ಪದವೀಧರರ ಕ್ಷೇತ್ರ) –**

೫೯೯ (೭೯೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾಲು ಮರದ ತಿಮ್ಮಕ್ಕನ ಹೆಸರಿನಲ್ಲಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು ;

(ಆ) ತಿಮ್ಮಕ್ಕ ಬೆಳೆಸಿದ ಮರಗಳು ಸರಿಯಾದ ಆರೈಕೆಯಿಲ್ಲದೆ ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅವುಗಳ ಸಂರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಇ) ತಿಮ್ಮಕ್ಕನ ವೈದ್ಯಕೀಯ ವೆಚ್ಚಕ್ಕಾಗಿ ಸರ್ಕಾರ ಇಲ್ಲಿಯವರೆಗೂ ಖರ್ಚು ಮಾಡಿರುವ ಹಣ ಎಷ್ಟು ; ಸದರಿಯವರಿಗೆ ಇರುವ ಖಾಯಿಲೆ ಯಾವುದು ;

(ಈ) ಆರೋಗ್ಯ ಸುಧಾರಣೆಗಾಗಿ ವೈದ್ಯಕೀಯ ಚಿಕಿತ್ಸೆ ಮತ್ತು ಔಷಧಿಗಳ ಸಂಪೂರ್ಣ ವೆಚ್ಚವನ್ನು ಭರಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಉ) ಮಾಗಡಿಯಲ್ಲಿ ಹೆರಿಗೆ ಆಸ್ಪತ್ರೆಯನ್ನು ಆರಂಭಿಸಬೇಕೆಂಬ ತಿಮ್ಮಕ್ಕನ ಕನಸನ್ನು ಸಾಕಾರಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆಸ್ಪತ್ರೆಗಳ ಕಾಮಗಾರಿ ಹಾಗೂ ಪಿಠೋಪಕರಣಗಳ ಖರೀದಿ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನ ಸಭೆಯಿಂದ ಚುನಾಯಿತರಾದವರು) –**

೬೦೦ (೭೮೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಬಾಗಲಕೋಟ, ಗದಗ, ಬಿಜಾಪುರ ಜಿಲ್ಲೆಯಲ್ಲಿ ಆಸ್ಪತ್ರೆಗಳ ಕಾಮಗಾರಿಗಳು ಮತ್ತು ಅವಶ್ಯ ಪೀಠೋಪಕರಣ ಚಿಕಿತ್ಸೆಗೆ ಅವಶ್ಯಕ ವಸ್ತುಗಳಿಗೆ ಹಾಗೂ ಔಷಧಿಗಳ ಖರೀದಿಗೆ ಇಲಾಖೆಯಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಮತ್ತು ಇತರೆ ಮೂಲಗಳಿಂದ ಬಂದಿರುವ ಹಣ ಎಷ್ಟು;

(ಆ) ಆ ಪೈಕಿ ಖರ್ಚಾಗಿರುವ ಹಣವೆಷ್ಟು? (ವರ್ಷಾವಾರು ವಿವರ ನೀಡುವುದು)

## ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ವ್ಯವಸ್ಥೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನ ಸಭೆಯಿಂದ ಚುನಾಯಿತರಾದವರು) –**

೬೦೧ (೭೮೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬಾಗಲಕೋಟೆ, ಬಿಜಾಪುರ, ಗದಗ, ಕೊಪ್ಪಳ ಜಿಲ್ಲೆಗಳಿಂದ ಕಳೆದ ೪ ವರ್ಷಗಳಿಂದ ಈ ಹಾಸ್ಟೆಲ್‌ಗಳ ಮಕ್ಕಳ ಊಟದ ವ್ಯವಸ್ಥೆಗೆ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕಳಪೆ ಗುಣಮಟ್ಟದ ಆಹಾರ ಸೇವಿಸಿ ಅಸ್ವಸ್ಥಗೊಂಡ ಘಟನೆಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ಇಂತಹ ಘಟನೆಗಳಿಗೆ ಕಾರಣರಾದ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ಹಾಸ್ಟಲ್‌ವಾರು ಮಾಹಿತಿ ನೀಡುವುದು)

## ಆಸ್ಪತ್ರೆಗಳ ಕಾಮಗಾರಿ ಹಾಗೂ ಪಿಠೋಪಕರಣಗಳ ಖರೀದಿ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೬೦೨ (೭೮೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಯಲ್ಲಿ ಆಸ್ಪತ್ರೆಗಳ ಕಾಮಗಾರಿಗಳು ಮತ್ತು ಅವಶ್ಯ ಪೀಠೋಪಕರಣ, ಚಿಕಿತ್ಸೆಗೆ ಅವಶ್ಯಕ ವಸ್ತುಗಳಿಗೆ ಹಾಗೂ ಔಷಧಿಗಳ ಖರೀದಿಗೆ ಇಲಾಖೆಯಿಂದ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಮತ್ತು ಇತರೆ ಮೂಲಗಳಿಂದ ಬಂದಿರುವ ಹಣ ಎಷ್ಟು; (ವಿವರ ನೀಡುವುದು)

(ಆ) ಆ ಪೈಕಿ ಖರ್ಚಾಗಿರುವ ಹಣವೆಷ್ಟು? (ವರ್ಷಾವಾರು ವಿವರ ನೀಡುವುದು)

## ಗುಲ್ಬರ್ಗಾ ಜಿಲ್ಲೆಯ ಬಸ್‌ಗಳ ವ್ಯವಸ್ಥೆ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೬೦೩ (೭೫೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಜಿಲ್ಲೆಗೆ ಕಳೆದ ೨ ವರ್ಷಗಳಲ್ಲಿ ಯಾವ ಯಾವ ಮಾರ್ಗಗಳಿಂದ ಹೊಸ ಬಸ್‌ಗಳನ್ನು ಆರಂಭಿಸಲಾಗಿದೆ ;

(ಆ) ಗುಲ್ಬರ್ಗಾ ಜಿಲ್ಲೆಗೆ ವೋಲ್ವೊ ಬಸ್‌ಗಳ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ ಕೈಗೊಂಡಿರುವ ಕ್ರಮಗಳೇನು ;

(ಇ) ಇದರಿಂದ ಖಾಸಗಿ ಬಸ್ಸುಗಳಿಗೆ ಪ್ರಯೋಜನವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಗುಲ್ಬರ್ಗಾ ಜಿಲ್ಲೆಯ ದಲಿತರ ಸ್ಮಶಾನಗಳಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೬೦೪ (೭೬೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಜಿಲ್ಲೆಯ ಯಾವ ಯಾವ ತಾಲ್ಲೂಕಿನ ಯಾವ ಯಾವ ಗ್ರಾಮಗಳಲ್ಲಿ ದಲಿತರ ಸ್ಮಶಾನಗಳಿರುತ್ತವೆ ; ವಿವರ ಒದಗಿಸುವುದು ;

(ಆ) ಜಿಲ್ಲೆಯಲ್ಲಿ ಯಾವ ಯಾವ ಗ್ರಾಮಗಳಲ್ಲಿ ದಲಿತ ಸ್ಮಶಾನಗಳಿರುವುದಿಲ್ಲ ಇಲ್ಲದಿರುವುದಕ್ಕೆ ಸೂಕ್ತ ಕಾರಣ ತಿಳಿಸುವುದು ;

(ಇ) ಜಿಲ್ಲೆಯಲ್ಲಿ ದಲಿತರ ಸ್ಮಶಾನಗಳಿಲ್ಲದ ಗ್ರಾಮಗಳಿಗೆ ಸ್ಮಶಾನಗಳನ್ನು ಒದಗಿಸುವ ಪ್ರಸ್ತಾವನೆ ಇದೆಯೇ ಇದ್ದಲ್ಲಿ ಎಷ್ಟು ಸಮಯದಲ್ಲಿ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ?

## B.T.F.S. ಶಾಲೆ ಆರಂಭಿಸಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ನಾಮ ನಿರ್ದೇಶನ ಹೊಂದಿದವರು) –**

೬೦೫ (೭೯೯) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(a) when was the Biotechnology Finish School (BTFS) started, How many batches have been completed so far ;

(b) how many students have taken Karnataka Biotechology Aptitude Test (KBAT) so far ; (Give year-wise break-up) ; how many students are from Karnataka and how many are from outside the state ; (give-year-wise-up) (percentage wise details)

(c) how many companies have turned up for placements ; give names of the companies for each of the batches ;

(d) how many students were successfully placed ; (give numbers batch-wise)

(e) what is the number of students who were not pleced (NP) ; what are there major reasons for them not getting placed ;

(f) how many students have dropped out so for (give year-wise-details) what are reasons;

(g) how much money has the government spent on BTFS since its inception ? (give year-wise break-up of expenditure)

## ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ತಜ್ಞರ ಸಮಿತಿ ರಚಿಸಿರುವ ಬಗ್ಗೆ

**ಶ್ರೀ ಲಹರ್‌ಸಿಂಗ್ ಸಿರೋಯ (ನಾಮನಿರ್ದೇಶನ ಹೊಂದಿದವರು) –**

೬೦೬ (೬೦೨) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :—

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ೨೦೧೦ ರಿಂದ ೨೦೧೩ರವರೆಗೆ ಎಷ್ಟು ತಜ್ಞರ ಪರಿಣಿತರ ಸಮಿತಿಗಳನ್ನು ಯಾವ ಯಾವ ಕಾರಣಗಳಿಗೆ ನೇಮಕ ಮಾಡಲಾಗಿದೆ ; (ಸಮಿತಿವಾರು ಪೂರ್ಣ ವಿವರ ಹಾಗೂ ಸದಸ್ಯರುಗಳ ವಿಳಾಸ ನೀಡುವುದು)

(ಆ) ಈ ಸಮಿತಿಗಳ ಸದಸ್ಯರುಗಳಿಗೆ ನೀಡಲಾದ ಸಂಭಾವನೆ ಸರ್ಕಾರಿ ಸೌಲಭ್ಯಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಸಮಿತಿಗಳನ್ನು ನೇಮಕ ಮಾಡಿದ ಉದ್ದೇಶದ ಬಗ್ಗೆ ವರದಿಗಳನ್ನು ಇಲಾಖೆಗೆ ಸಲ್ಲಿಸಲಾಗಿದೆಯೇ ? (ಸಲ್ಲಿಸಲಾದ ದಿನಾಂಕ ಮತ್ತು ವರದಿಗಳ ಸಂಪೂರ್ಣ ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು